
BV
ಕನ್ನಡ ದಿನಪತ್ರಿಕೆ
24 ಫೆಬ್ರುವರಿ । ಶನಿವಾರ
24 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 07 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ವಸತಿ ಶಾಲೆಗಳಲ್ಲಿ ಸಿಬಿಎಸ್‌ಸಿ ಪತ್ಯಕ್ರಮ ಜಾರಿ: ಸಚಿವ ಮಹದೇವಪ್ಪ



ಬೆಂಗಳೂರು: ವಸತಿ ಶಾಲೆಗಳಲ್ಲಿ CBSE ಪತ್ಯಕ್ರಮ ಅಳವಡಿಕೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ವಿಧಾನ ಪರಿಷತ್ ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್ ಅನಿಲ್ ಕುಮಾರ್ ಪ್ರಶ್ನೆ ಕೇಳಿದರು. ವಸತಿ ಶಾಲೆಗಳಲ್ಲಿ ಅಃಖಇ ಪತ್ಯಕ್ರಮ ಅಳವಡಿಕೆ ಮಾಡಬೇಕು. ವಸತಿ ಶಾಲೆಗಳಲ್ಲಿ ಪಿಯುಸಿ ತರಗತಿಗಳನ್ನ ಪ್ರಾರಂಭ ಮಾಡಬೇಕು. ವಸತಿ ಇಲಾಖೆಯಲ್ಲಿ ಖಾಲಿ ಇರೋ ಶಿಕ್ಷಕರ ಹುದ್ದೆ ನೇಮಕ ಮಾಡಬೇಕು.

ವಸತಿ ಶಾಲಾ ಶಿಕ್ಷಕರ ಸಂಬಳ ಪ್ರತಿ ತಿಂಗಳು ಬೇಗ ಬಿಡುಗಡೆ ಮಾಡಿ. ಶಿಕ್ಷಣ ಇಲಾಖೆ ಶಿಕ್ಷಕರ ವೇತನ ತಿಂಗಳ ಮೊದಲ ದಿನ ಬಿಡುಗಡೆ ಆಗುತ್ತದೆ. ಅದರಂತೆ ವಸತಿ ಶಾಲೆಗಳಲ್ಲಿ ಜಾರಿ ಮಾಡಿ. ವಸತಿ ಶಾಲೆ ಮಕ್ಕಳಿಗೆ ಬೆಡ್, ಶೂ, ಸೋಪ್ ಬಾಕ್ಸ್ ಕೊಟ್ಟಿಲ್ಲ ಎಂದು ಆರೋಪ ಮಾಡಿದರು.

ಇದಕ್ಕೆ ಸಚಿವ ಮಹದೇವಪ್ಪ ಉತ್ತರ ನೀಡಿ, ವಸತಿ ಶಾಲೆಗಳಲ್ಲಿ ಸದ್ಯ ರಾಜ್ಯ ಪತ್ಯಕ್ರಮ ಇದೆ. ಪ್ರತಿ ಜಿಲ್ಲೆಗೆ ಒಂದು ವಸತಿ ಶಾಲೆಯಲ್ಲಿ CBSE ಪತ್ಯ ಅಳವಡಿಕೆಗೆ ಕ್ರಮವಹಿಸಲಾಗುತ್ತಿದೆ. ಪ್ರಸ್ತುತ 84 ಶಾಲೆಗಳ ಪಿಯುಸಿ ತರಗತಿ ಇವೆ. ಉಳಿದ ವಸತಿ ಶಾಲೆಗಳಲ್ಲಿ ಪಿಯುಸಿ ತರಗತಿ ಪ್ರಾರಂಭಕ್ಕೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆರ್ಥಿಕ ಇಲಾಖೆ ಇನ್ನು ಅನುಮತಿ ಕೊಟ್ಟಿಲ್ಲ. ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಒದಗಿಸಲು ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

# ಬೆಂಗಳೂರು: ಫೆ.29 ರಿಂದ ಮಾ.9 ರವರೆಗೆ ಸರಸ್ ಮೇಳ



ಬೆಂಗಳೂರು: ಮಹಿಳೆಯರ ಸಬಲೀಕರಣ ಮತ್ತು ಸ್ವಾವಲಂಬನೆಗೊಳಿಸುವ ಏಕೈಕ ಉದ್ದೇಶದಿಂದ ಬೆಂಗಳೂ–ರಿನ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಇದೇ ತಿಂಗಳ 29ರಿಂದ ಮಾ.9ರವರೆಗೆ ರಾಷ್ಟ್ರೀಯ ಸಾರಸ್ ಮೇಳ ಮತ್ತು ಬೃಹತ್ ರಾಷ್ಟೀಯ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಆಯೋಜನೆ ಮಾಡಲಾಗಿದೆ.

ಈ ಸಂಬಂಧ ಶುಕ್ರವಾರ ವಿಕಾಸಸೌಧದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಶಾಸಕರಾದ ಎಸ್.ಟಿ.ಸೋಮಶೇಖರ್, ಶ್ರೀನಿವಾಸ್ ಸೇರಿದಂತೆ ಮತ್ತಿತರ ಅಧಿಕಾರಿಗಳು,ನಮ್ಮ ಸರಸ್ ಮೇಳ 2024 ಮತ್ತು ಅಕ್ಕ ಕೆಫೆ ಲೋಗೋ ಅನಾವರಣಗೊಳಿಸಿದರು.

ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರು, ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯಿಂದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಬೃಹತ್ ವಸ್ತುಪ್ರದರ್ಶನ ಮತ್ತು ಮಾರಾಟ ಮೇಳ ಇದೇ ತಿಂಗಳ 29ರಿಂದ ಮಾ.9ರವರೆಗೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

ರಾಷ್ಟ್ರೀಯ ಸರಸ್ ಮೇಳವು ರಾಷ್ಟ್ರೀಯ ಮಟ್ಟದ ಕಾರ್ಯಕ್ರಮವಾಗಿದ್ದು, ಇದರಲ್ಲಿ ದೇಶಾದ್ಯಂತದ 250 ಸ್ವ–ಸಹಾಯ ಗುಂಪುಗಳು ಭಾಗವಹಿಸಲಿವೆ. ಗುಂಪುಗಳು ಉತ್ಪಾದಿಸಿದ ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸುತ್ತವೆ.

ಈ ಕಾರ್ಯಕ್ರಮವು ಕರ್ನಾಟಕದಾದ್ಯಂತ ವಿವಿಧ ರೀತಿಯ ಕರಕುಶಲ ವಸ್ತುಗಳನ್ನು ಮತ್ತು ವಿವಿಧ ರೀತಿಯ ಆಹಾರ ಉತ್ಪನ್ನಗಳನ್ನು ಪ್ರದರ್ಶಿಸುತ್ತದೆ. ಕಾರ್ಯಕ್ರಮವು ವಿವಿಧ ಗಣ್ಯರಿಂದ ಸಾಂಸ್ಕೃತಿ–ಕ ಕಾರ್ಯಕ್ರಮಗಳನ್ನು ಸಹ ಒಳಗೊಂಡಿರುತ್ತದೆ ಎಂದು ಮಾಹಿತಿ ನೀಡಿದರು.

ಮೇಳವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಮತ್ತಿತರರು ಉದ್ಘಾಟಿಸಲಿದ್ದಾರೆ. ಸರ್ಕಾರ ಈ ಮೇಳಕ್ಕೆ ವಿಶೇಷವಾದ ಒತ್ತು ಕೊಟ್ಟಿದೆ. ಏಕೆಂದರೆ ಬದಲಾವಣೆಯಾಗುವುದಾದರೆ ಅದು ಮಹಿಳೆಯರಿಂದ ಸಾಧ್ಯ ಎಂಬುದು ನಮ್ಮ ಸರ್ಕಾರಕ್ಕೆ ಅರ್ಥವಾಗಿದೆ. ಹಾಗಾಗಿ ಇದಕ್ಕೆ ವಿಶೇಷ ಒತ್ತು ಕೊಟ್ಟಿದ್ದೇವೆ ಎಂದು ಪಾಟೀಲ್ ತಿಳಿಸಿದರು.

ಬೃಹತ್ ಉದ್ಯೋಗ ಮೇಳ: ಈಗಾಗಲೇ ನಿಗದಿಯಾಗಿರುವಂತೆ ಬೆಂಗಳೂರಿನ ಅರಮನೆ ಮೈದಾನದಲ್ಲಿ 22 ದಿನಗಳ ಬೃಹತ್ ಉದ್ಯೋಗ ಮೇಳ ನಡೆಯಲಿದೆ. ಎಂಜಿನಿಯರಿಂಗ್, ಡಿಪ್ಲೊಮಾ, ಐಟಿಐ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳನ್ನು ಮುಗಿಸಿದ ಉದ್ಯೋಗ ಆಕಾಂಕ್ಷಿಗಳಿಗೆ ಒಂದೇ ಸೂರಿನಡಿ ಉದ್ಯೋಗ ಕಲ್ಪಿಸಿಕೊಡುವುದು ನಮ್ಮ ಸರ್ಕಾರದ ಉದ್ದೇಶವಾಗಿದೆ. ಇದಕ್ಕಾಗಿ ನಮ್ಮ ಸಿದ್ದತೆಗಳು ಮುಕ್ತಾಯ ಹಂತದಲ್ಲಿದೆ ಎಂದು ಮಾಹಿತಿ ನೀಡಿದರು.

ಡಿ.ಕೆ.ಶಿವಕುಮಾರ್ ಮಾತನಾಡಿ, ಈ ರೀತಿಯ ಕರಕುಶಲ ವಸ್ತು ಪ್ರದರ್ಶನ ಬೆಂಗಳೂರಿನಲ್ಲಿ ಇಡೀ ವರ್ಷ ನಡೆಯಲು ಅನುಕೂಲವಾಗುವಂತೆ ಶಾಶ್ವತ ಪ್ರದರ್ಶನ ಕೇಂದ್ರಕ್ಕೆ ಸ್ಥಳಾವಕಾಶ ಕಲ್ಪಿಸಲು ಹುಡುಕಾಟ ನಡೆಯುತ್ತಿದೆ. ಬ್ರಾಂಡ್ ಬೆಂಗಳೂರು ಅಭಿಯಾನದಡಿಯಲ್ಲಿ ಇಂತಹ ಕಾರ್ಯಕ್ರಮ ಆಯೋಜಿಸಲಾಗಿತ್ತಿದೆ ಎಂದರು

## ಪಂಚ ಗ್ಯಾರಂಟಿ ಸಮೀಕ್ಷೆ: ವಿಡಿಯೋ ಕಾನ್ಫರೆನ್ಸ್ ನಡೆಸಿದ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್



ಬೆಂಗಳೂರು : ಕರ್ನಾಟಕ ಸರ್ಕಾರದ ಬಹುನಿರೀಕ್ಷಿತ ಪಂಚ ಗ್ಯಾರಂಟಿ ಯೋಜನೆಗಳ ಸಮೀಕ್ಷೆಯು ಇದೇ ಸೋಮವಾರದಿಂದ (ಫೆ.26) ಮಾರ್ಚ್ 3 ರವರೆಗೆ ರಾಜ್ಯಾದ್ಯಂತ ನಡೆಯಲಿದೆ.

ಇದರಿಂದಾಗಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸ್ಪಷ್ಟ ಚಿತ್ರಣ ತಿಳಿಯಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು.

ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಮೊಬೈಲ್/ವೆಬ್ ತಂತ್ರಾಂಶದ ಮೂಲಕ ಸಮೀಕ್ಷೆ (ಜಿಎಸ್‌ಎಸ್) ನಡೆಸುವ ಸಂಬಂಧ ಇಂದು ವಿಕಾಸ ಸೌಧದಿಂದ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ (ಸಿಇಒ) ವಿಡಿಯೋ ಕಾನ್ಫರೆನ್ಸ್ ನಡೆಸಲಾಯಿತು. ಯೋಜನೆಗಳು ತಲುಪಿರುವ ಮತ್ತು ತಲುಪದಿರುವ ಕುಟುಂಬಗಳ ಸರ್ವೆ ನಡೆಸುತ್ತಿದ್ದು, ಈ ಮೂಲಕ ಯೋಜನೆ ತಲುಪದ ಕುಟುಂಬಗಳ ಸಂಖ್ಯೆ ಮತ್ತು ಕಾರಣ ತಲುಪಲಿದೆ ಎಂದರು. ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತರು ಮನೆ ಮನೆಗೆ ತೆರಳಿ ಸರ್ವೆ ಕಾರ್ಯ ನಡೆಸಲಿದ್ದು, ಯೋಜನೆಯ ಲಾಭ ಪಡೆದಿರುವ ಹಾಗೂ ಪಡೆಯದ ಕುಟುಂಬಗಳ ಮಾಹಿತಿ ಸಂಗ್ರಹಿಸಲಿದ್ದಾರೆ ಎಂದು ಸಚಿವರು ತಿಳಿಸಿದರು. ಈ ವೇಳೆ ಅಭಿವೃದ್ಧಿ ಆಯುಕ್ತರಾದ ಶಾಲಿನಿ ರಜನೀಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಡಾ.ಜಿ.ಸಿ.ಪ್ರಕಾಶ್, ನಿರ್ದೇಶಕರಾದ ಎಂ.ಎಸ್.ಅರ್ಚನಾ ಸೇರಿದಂತೆ ಇ–ಗವರ್ನೆಸ್ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ನಟ ದರ್ಶನ್ ವಿರುದ್ಧ ನಾಲ್ಕು ಕೇಸ್ ದಾಖಲು



ಬೆಂಗಳೂರು: ಚಾಲೇಂಜಿಂಗ್ ಸ್ಟಾರ್ ದರ್ಶನ್ ವಿರುದ್ಧ ಸಾಲು ಸಾಲು ದೂರು ದಾಖಲಾಗಿದೆ. ಎರಡು ದಿನಗಳಲ್ಲಿ ಒಟ್ಟು ನಾಲ್ಕು ಕೇಸ್ ದಾಖಲಾಗಿದೆ.

ದರ್ಶನ್ ಸಿನಿಮಾ ರಂಗಕ್ಕೆ ಕಾಲಿಟ್ಟು 25 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಇತ್ತೀಚೆಗೆ ನಡೆದ ಬೆಳ್ಳಿ ಸಂಭ್ರಮ ಕಾರ್ಯಕ್ರಮದಲ್ಲಿ ವೇದಿಕೆ ಮೇಲೆ ಮಾತನಾಡುವಾಗ ನಟ ದರ್ಶನ್ ಹೆಣ್ಣು ಮಕ್ಕಳ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ ಹಿನ್ನೆಲೆಯಲ್ಲಿ ಹಾಗೂ ನಿರ್ಮಾಪಕ ಉಮಾಪತಿ ಶ್ರೀನಿವಾಸ್ ಅವರನ್ನು 'ಅಯ್ಯೋ ' ಎಂದು ನಿಂದಿಸಿದ ಕಾರಣಕ್ಕೆ ಮಹಿಳಾ ಒಕ್ಕೂಟ ಹಾಗೂ ಕೆಲ ಸಮುದಾಯದ ಮುಖಂಡರು ದರ್ಶನ್ ವಿರುದ್ಧ ದೂರು ದಾಖಲಿಸಿದ್ದಾರೆ.

ಗೌಡತಿಯ ಸೇನೆ ಫೆ.22ರಂದು ದರ್ಶನ್ ವಿರುದ್ಧ ಮಹಿಳಾ ಆಯೋಗಕ್ಕೆ ದೂರು ನೀಡಿತ್ತು. ಇಂದು ಸ್ತ್ರೀಶಕ್ತಿ ಮಹಿಳಾ ಸ್ವಸಹಾಯ ಸಂಘದಿಂದ ದರ್ಶನ್ ವಿರುದ್ಧ ಪುಟ್ಟೇನಹಳ್ಳಿ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ. ಹೆಣ್ಣು ಮಕ್ಕಳ ಬಗ್ಗೆ ಕೆಟ್ಟದಾಗಿ ಮಾತನಾಡಿದ ಹಿನ್ನೆಲೆಯಲ್ಲಿ ನಟನ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರು ನೀಡಲಾಗಿದೆ.

ಈ ಬೆಳವಣಿಗೆ ಬೆನ್ನಲ್ಲೇ ಆರ್.ಆರ್.ನಗರ ಠಾಣೆಯಲ್ಲಿ ದರ್ಶನ್ ವಿರುದ್ಧ ಮತ್ತೆರಡು ದೂರು ದಾಖಲಾಗಿದೆ. ವೇದಿಕೆ ಮೇಲೆ ಹೆಣ್ಣುಮಕ್ಕಳ ಬಗ್ಗೆ ತುಚ್ಛವಾಗಿ ಮಾತನಾಡಿದ್ದಾರೆ. ಇದು ರಾಜ್ಯದ ಹಾಗೂ ದೇಶದ ಮಹಿಳಾ ಕುಲಕ್ಕೆ ಮಾಡಿದ ಅಪಮಾನ. ಅಲ್ಲದೇ ಪ್ರಭಾವಿ ಸಮುದಾಯದ ನಾಯಕ–ರಿಗೆ ಅಪಮಾನ ಮಾಡಿದ್ದಾರೆ. ಸಮುದಾಯ ರೊಚ್ಚಿಗೇಳುವ ಮುನ್ನ ದರ್ಶನ್ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಗಣೇಶ್ ಗೌಡ ಹಾಗೂ ಜಗದೀಶ್ ಎಂಬುವವರು ದೂರು ದಾಖಲಿಸಿದ್ದಾರೆ.

# ಬೆಳಗಾವಿ-ಗೋವಾ ರಸ್ತೆಗೆ ಈಗ ದುರಸ್ತಿ ಭಾಗ್ಯ



ಬೆಳಗಾವಿ: ಸಚಿವ ಸತೀಶ್ ಜಾರಕಿಹೊಳಿ ಅವರ ಸಾಮಾಜಿಕ ಕಾಳಜಿ ಮತ್ತು ಇಚ್ಛಾಶಕ್ತಿಯ ಪರಿಣಾಮ ಬೆಳಗಾವಿ– ಚೋರ್ಲಾ –ಗೋವಾ ರಸ್ತೆ ಈಗ ರಿಪೇರಿ ಆಗುತ್ತಿರುವುದು ಎಲ್ಲಡೆ ಸಂತಸದ ಸಂಗತಿಯಾಗಿದೆ.

ಹಬ್ಬ ಹರಿದಿನಗಳು ಮತ್ತು ಪ್ರವಾಸೋದ್ಯಮ ಋತುವಿನ ಆಗಮನದಿಂದಾಗಿ ಬೆಳಗಾವಿ ಮತ್ತು ಗೋವಾ ನಡುವೆ ಸಂಚಾರ ದಟ್ಟಣೆ ಹೆಚ್ಚುತ್ತಿರುವಾಗ, ಕರ್ನಾಟಕ ಪಟ್ಟಣದಿಂದ ಗೋವಾವರೆಗಿನ ಎಲ್ಲಾ ರಸ್ತೆಗಳು ಅತ್ಯಂತ ಹದಗೆಟ್ಟು ಪ್ರಯಾಣಿಕರು ಮತ್ತು ಗ್ರಾಮಸ್ಥ–ರಿಗೆ ಭಾರಿ ಅನಾನುಕೂಲತೆ ಉಂಟಾಗಿ–ತ್ತು. ಈ ರಸ್ತೆಯ ಪರಿಸ್ಥಿತಿಯನ್ನು ಖುದ್ದಾಗಿ ಪರಶೀಲಿಸಿದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ರಸ್ತೆ ದುರಸ್ತಿಗೆ ತುರ್ತು ಕ್ರಮ ಕೈಗೊಂಡಿದ್ದಾರೆ.

43.ಕಿ.ಮೀಟರ್ ಉದ್ದ ರಸ್ತೆಗೆ ದುರಸ್ತಿ ಭಾಗ್ಯ: ಗೋವಾದಿಂದ ರಣಕುಂಡಿ ಕ್ರಾಸ್ ವರೆಗಿನ ಈ ರಸ್ತೆ 43.ಕಿ.ಮೀಟರ್ ಉದ್ದವಾಗಿದ್ದು, 58.90 ಕೋಟಿ ರೂಪಾಯಿ ವೆಚ್ಚದಲ್ಲಿ ಸುಧಾರಣೆ ಕಾರ್ಯ ಕೈಗೊಳ್ಳಲಾಗುತ್ತಿದೆ. 11 ತಿಂಗಳ ಅವಧಿಯಲ್ಲೇ ರಸ್ತೆ ದುರಸ್ತಿ ಕಾರ್ಯ ಮುಗಿಸುವ ಗುರಿ ಹೊಂದಲಾಗಿದೆ. ಅಲ್ಲದೇ ನಾಳೆ 1–00 ಗಂಟೆಗೆ ಕಣಕುಂಬಿ ಹತ್ತಿರ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಚೋರ್ಲಾ ರಸ್ತೆಯ ದುರಸ್ತಿ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ. ನಾಳಿನ ಕಾರ್ಯಕ್ರಮದಲ್ಲಿ ಮುಖ್ಯ ಇಂಜಿನಿಯರ್ ಸಿ. ಮಂಜಪ್ಪ, ಎಜುಕೆಟಿವ್ ಇಂಜಿನಿಯರ್ ಪಿ. ರಾಜೇಂದ್ರ ಸೇರಿದಂತೆ ಇನ್ನಿತರ ಅಧಿಕಾರಿಗಳು ಇರಲಿದ್ದಾರೆ.

ಕೇಂದ್ರದಲ್ಲಿ ಗಡ್ಕರಿ–ರಾಜ್ಯದಲ್ಲಿ ಜಾರಕಿಹೊಳಿ: ವಿವಿಧ ಅಭಿವೃದ್ಧಿ ಕಾಮಗಾರಿ ಮಾಡುವಲ್ಲಿ ಸದಾ ಕ್ರೀಯಾಶೀಲರಾದ ಸಚಿವ ಸತೀಶ್ ಜಾರಕಿಹೊಳಿ ಅವರ ಕಾರ್ಯಕ್ಕೆ ಜಿಲ್ಲೆ ಸೇ–ರಿದಂತೆ ರಾಜ್ಯದಲ್ಲೂ ಸಹ ಮೆಚ್ಚುಗೆ ವ್ಯಕ್ತವಾಗುತ್ತಿವೆ. ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಅವರು ತಮ್ಮ ಕಾರ್ಯಾ ಅವಧಿಯಲ್ಲಿ ಸುಮಾರು 50 ಸಾವಿರ ಲಕ್ಷ ಕೋಟಿಗಳಷ್ಟು ಕೆಲಸ ಮಾಡಿ ಕೇಂದ್ರದಲ್ಲಿ ಮಿಂಚಿ ದೇಶವೇ ಅವರತ್ತ ನೋಡುವ ಹಾಗೇ ಮಾಡಿದ್ದಾರೆ. ಅದೇ ರೀತಿ 'ಸರಳತೆಯ ಸಾಹುಕಾರ' ಎಂದೇ ಹೆಸರಾದ ಸಚಿವ ಸತೀಶ್ ಜಾರಕಿಹೊಳಿ ಕೂಡಾ ರಾಜ್ಯದಲ್ಲಿ ರಸ್ತೆಗಳು ಪ್ರಗತಿಯತ್ತ ಕೊಂಡ್ಯೊಯಲು ಕಟಿಬದ್ದರಾಗಿ ನಿಂತಿ–ದ್ದಾರೆ. ಸಾರ್ಜನಿಕರಿಗೆ ಹಾಗೂ ಪ್ರಯಾಣಿಕ–ರಿಗೆ ಯಾವುದೇ ರೀತಿ ತೊಂದರೆಯಾಗದಂತೆ ರಸ್ತೆ ಕಾಮಗಾರಿ ಸೇರಿದಂತೆ ವಿವಿಧ ಅಭಿವೃದ್ಧಿ ಕೆಲಸ ಮಾಡಲು ಮುಂದಾಗಿದ್ದಾರೆ. ಇವರ ಈ ಕಾರ್ಯಕ್ಕೆ ಜಿಲ್ಲೆ ಸೇರಿದಂತೆ ರಾಜ್ಯದಲ್ಲೂ ಉತ್ತಮ ಪ್ರತಿಕ್ರೀಯೆ ವ್ಯಕ್ತವಾಗುತ್ತಿವೆ. ಅಭಿವೃದ್ಧಿ ಹರಿಕಾರ ಯಾರು ಎಂದರೆ ಕೇಂದ್ರದಲ್ಲಿ ಗಡ್ಕರಿ– ರಾಜ್ಯದಲ್ಲಿ ಜಾರಕಿಹೊಳಿ ಎಂಬ ಮಾತುಗಳು ಎಲ್ಲಡೆ ಹರಿದಾಡುತ್ತಿವೆ.

ಇನ್ಮುಂದೆ ಬೆಳಗಾವಿ–ಗೋವಾ ಸಂಚಾರ ಸುಗಮ: ಬೆಳಗಾವಿ–ಚೋರ್ಲಾ ಮಾರ್ಗವಾಗಿ ದಿನನಿತ್ಯ ಸಾವಿರಾರು ವಾಹನಗಳು ಓಡಾಡುತ್ತವೆ. ಅಲ್ಲದೇ ಈ ರಸ್ತೆ ಹದಗೆಟ್ಟಿದ್ದ–ರಿಂದ ಅಲಲ್ಲಿ ಗುಂಡಿ ತಪ್ಪಿಸಲು ಅಪಘಾತವಾದ ಉದಾಹರಣೆಗಳು ಸಾಕಷ್ಟಿವೆ. ಇಲ್ಲಿರುವ ಸಮಸ್ಯೆಯನ್ನು ಸ್ವತಃ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರು ಖುದ್ದಾಗಿ ಪರಶೀಲಿಸಿ ಪ್ರಯಾಣಿಕರ ಹಿತ ದೃಷ್ಟಿಯಿಂದ ಸುಗಮ ಸಂಚಾರಕ್ಕೆ ತುರ್ತು ಕ್ರಮ ಕೈಗೊಂಡಿದ್ದಾರೆ. ಇವರ ಈ ಕಾರ್ಯಕ್ಕೆ ಎಲ್ಲಡೆ ಮೆಚ್ಚುಗೆ ವ್ಯಕ್ತವಾಗಿದ್ದು, ನಾಳೆಯೇ ಈ ಶುಭ ಕಾರ್ಯಕ್ಕೆ ಚಾಲನೆ ಸಿಗಲಿದೆ.

## ಗಡಿ ವಿವಾದದ ಕ್ಯಾತೆ: ಮಹಾರಾಷ್ಟ್ರಕ್ಕೆ ಎಚ್ಚರಿಕೆ ನೀಡಿದ ಕರ್ನಾಟಕ



ಬೆಂಗಳೂರು: ಗಡಿ ವಿಚಾರದಲ್ಲಿ ಪದೇ ಪದೇ ಕ್ಯಾತೆ ತೆಗೆಯುತ್ತಿರುವ ನೆರೆಯ ಮಹಾರಾಷ್ಟ್ರಕ್ಕೆ ಕರ್ನಾಟಕ ಶುಕ್ರವಾರ ಎಚ್ಚರಿಕೆ ನೀಡಿದೆ. ನಾವು ದೇಶದಲ್ಲಿನ ಒಕ್ಕೂಟ ವ್ಯವಸ್ಥೆಯ ಭಾಗವಾಗಿದ್ದೇವೆ. ನಮ್ಮ ಅನುಮತಿ ಇಲ್ಲದೆ ಗಡಿಯೊಳಗೆ ಯಾವುದೇ ಚಟುವಟಿಕೆ ಕೈಗೊಳ್ಳಲು ಮಹಾರಾಷ್ಟ್ರ ಯತ್ನಿಸಿದರೆ, ಕಾನೂನು ಮತ್ತು ಸಂವಿಧಾನಕ್ಕೆ ಅಗೌರವ ತೋರಿಸುವಂತಹದ್ದಾಗಿದ್ದು, ಅಂತಹ ಚಟುವಟಿಕೆಗಳನ್ನು ಕರ್ನಾಟಕ ಸಹಿಸುವುದಿಲ್ಲ ಎಂದು ಕಾನೂನು ಸಚಿವ ಎಚ್. ಕೆ. ಪಾಟೀಲ್ ವಿಧಾನಪ–ರಿಷತ್ತಿನಲ್ಲಿ ಶುಕ್ರವಾರ ಹೇಳಿದರು. ಗಡಿ ವಿಚಾರದಲ್ಲಿ ಕ್ಷುಲ್ಲಕ ರಾಜಕಾರಣಕ್ಕೆ ಬರುವುದಿಲ್ಲ ಎಂದು ಯಾವಾಗಲೂ ಕರ್ನಾಟಕ ಸ್ಪಷ್ಟಪಡಿಸುತ್ತಿದೆ. ಆದರೆ ಮಹಾರಾಷ್ಟ್ರದಲ್ಲಿ ಅಧಿಕಾರದಲ್ಲಿರುವವರು ಚುನಾವಣೆ ಬಂದಾಗಲೆಲ್ಲಾ ಆ ರೀತಿ ನಡೆದುಕೊಳ್ಳುತ್ತಾರೆ. ನಮ್ಮ ನಿಲುವು ಸ್ಪಷ್ಟವಾಗಿದೆ. ಯಥಾಸ್ಥಿತಿ ಕಾಯ್ದುಕೊಳ್ಳುವಿಕೆ ಅಥವಾ ಮಹಾಜನ್ ವರದಿಯೇ ಅಂತಿಮ. ಅವರು ಸುಪ್ರೀಂ ಕೋರ್ಟ್‌ಗೆ ಹೋದರೆ ನಾವು ಸುಮ್ಮನೆ ಕೂರುವುದಿಲ್ಲ. ಅವರು ಇಂತಹ ಅನಗತ್ಯ ರಾಜಕೀಯವನ್ನು ನಿಲ್ಲಿಸಬೇಕು, ಆದರೆ ಅವರು ಹಾಗೆ ಮುಂದುವರಿಸಿದರೆ ನಾವು ಸೂಕ್ತವಾದ ಉತ್ತರ ನೀಡುತ್ತೇವೆ. ಅವರು ತಡೆದುಕೊಳ್ಳಲು ಆಗುವುದಿಲ್ಲ ಎಂದರು. ಕರ್ನಾಟಕದಲ್ಲಿ ಮರಾಠಿ ಮಾತನಾಡುವ ಜನರನ್ನು ಹೇಗೆ ನಡೆಸಿಕೊಳ್ಳಲಾಗುತ್ತದೆ ಎಂಬುದನ್ನು ಅವರು ನೋಡಬೇಕು. ಬೆಳಗಾವಿ ಪಾಲಿಕೆಯಲ್ಲಿ ಅಧಿಕಾರ ಪಡೆದಿದ್ದಾರೆ. ಕರ್ನಾಟಕ ನಡೆದುಕೊಳ್ಳುವ ರೀತಿಯಲ್ಲಿ ಮಹಾರಾಷ್ಟ್ರ ನಡೆದುಕೊಂಡು ಗಡಿ ಪ್ರದೇಶದಲ್ಲಿ ಶಾಂತಿಯುತ ವಾತಾವರಣ ನಿರ್ಮಿಸಬೇಕು ಎಂದು ಸಚಿವರು ಹೇಳಿದರು.


## ಆನ್ ಲೈನ್ ನಲ್ಲಿ ವಂಚನೆ: ಇಬ್ಬರು ಮಹಿಳೆಯರಿಗೆ ಲಕ್ಷಾಂತರ ರೂ. ಮೋಸ

ಉಡುಪಿ: ಆನ್ ಲೈನ್ ನಲ್ಲಿ ಪಾರ್ಟ್ ಟೈಂ ಉದ್ಯೋಗದ ಹಗರಣದ ವಂಚನೆಗೆ ಬಿದ್ದು ರೂ. 4.69 ಲಕ್ಷ ಕಳೆದುಕೊಂಡಿರುವುದಾಗಿ ಗಂಗೊಳ್ಳಿಯ 30 ವರ್ಷದ ಮಹಿಳೆಯೊಬ್ಬರು ಹೇಳಿದ್ದಾರೆ. ಬೆಂಗಳೂ–ರಿನ ಹೆಚ್ ಆರ್ ದಿವ್ಯಾ ಎಂದು ಹೆಸರು ಹೇಳಿಕೊಂಡ ಮಹಿಳೆಯೊಬ್ಬರು ವಾಟ್ಸಾಪ್ ನಲ್ಲಿ ಮೇಸೆಜ್ ಕಳುಹಿಸಿದ್ದು, ಪಾರ್ಟ್ ಟೈಂ ಉದ್ಯೋಗದ ಬಗ್ಗೆ ಮಾಹಿತಿ ನೀಡಿದ್ದಾರೆ.

ನಂತರ ಲಿಂಕ್ ಹಂಚಿಕೊಂಡಿದ್ದು, ಸಂಪೂರ್ಣ ಪ್ರಕ್ರಿಯೆಯನ್ನು ವಿವರಿಸಿದ್ದು, ಹಣ ಜಮೆ ಮಾಡಲು ತಿಳಿಸಿದ್ದಾರೆ. ಫೆಬ್ರವರಿ 3 ರಿಂದ 14ರವರೆಗೂ ರೂ. 5.26 ಲಕ್ಷ ಹಣ ವಂಚಿಸಿದ್ದು, ನಂತರ ರೂ. 57,201ಯನ್ನು ತನ್ನ ಖಾತೆಗೆ ವರ್ಗಾಯಿಸಿರುವುದಾಗಿ ಮಹಿಳೆ ನೀಡಿರುವ ದೂರಿನಲ್ಲಿ ಆರೋಪಿಸಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ರೂ. 12. 85 ಲಕ್ಷ ಹಣ ಕಳೆದುಕೊಂಡಿರುವುದಾಗಿ ಮಹಿಳೆಯೊಬ್ಬರು ಆರೋಪಿಸಿದ್ದಾರೆ. ಮನೆಯಿಂದಲೇ ಕೆಲಸ ನೀಡುವ ಆಮಿಷವೊಡ್ಡಿದ ಅಪರಿಚಿತ ವ್ಯಕ್ತಿಯೊಬ್ಬ, ಆಕೆಯಿಂದ ಅಪರಿಚಿತರ ಬ್ಯಾಂಕ್ ಖಾತೆಗೆ ಹಣ ಜಮೆ ಮಾಡಿಸಿಕೊಂಡಿದ್ದಾರೆ.

# ವಿಪಕ್ಷ ನಾಯಕನ ಸ್ಥಾನಕ್ಕೆ ಆರ್.ಅಶೋಕ್ ಅಯೋಗ್ಯ: ಪ್ರಮೋದ್ ಮುತಾಲಿಕ್ ವಾಗ್ದಾಳಿ



ಉಡುಪಿ: ಮಂಗಳೂರು ಪಬ್ ದಾಳಿಕೋರರ ಮೇಲೆ ಗೂಂಡಾ ಕಾಯ್ದೆ ಹಾಕಿದ್ದ ಬಗ್ಗೆ ಹೇಳಿಕೆ ನೀಡಿದ್ದ ವಿಪಕ್ಷ ನಾಯಕ ಆರ್.ಅಶೋಕ್ ವಿರುದ್ಧ ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ವಾಗ್ದಾಳಿ ನಡೆಸಿದ್ದಾರೆ.

ಪಬ್ ನಲ್ಲಿ ದಾಳಿ ನಡೆಸಿದ್ದ ಬಜರಂಗದಳ ಕಾರ್ಯಕರ್ತರ ಮೇಲೆ ಗೂಂಡಾ ಕಾಯ್ದೆ ಹಾಕಿ ಕ್ರಮ ಕೈಗೊಂಡಿದ್ದೆ ಎಂದು ಆರ್.ಅಶೋಕ್ ವಿಧಾನಸಭೆಯಲ್ಲಿ ಹೇಳಿದ್ದರು. ಇದೇ ವಿಚಾರವಾಗಿ ಉಡುಪಿಯಲ್ಲಿ ಮಾತನಾಡಿದ ಪ್ರಮೋದ್ ಮುತಾಲಿಕ್, ಆರ್.ಅಶೋಕ್ ವಿಪಕ್ಷ ನಾಯಕ ಸ್ಥಾನಕ್ಕೆ ಅಯೋಗ್ಯ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗೂಂಡಾ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದು ಹಿಂದು ಕಾರ್ಯಕರ್ತ–ರಿಗೆ ಆರ್.ಅಶೋಕ್ ನೀಡಿದ ಕೊಡುಗೆ. ಅವರು ಗೃಹ ಸಚಿವರಾಗಿದ್ದಾಗ ಪಿಎಫ್ ಐ ಗಲಾಟೆ ಮಾಡಿತ್ತು. ಆದರೆ ಆ ಬಗ್ಗೆ ಗೃಹ ಸಚಿವರಾಗಿ ಆರ್. ಅಶೋಕ್ ಒಂದೇ ಒಂದು ಪತ್ರವನ್ನೂ ಕೇಂದ್ರಕ್ಕೆ ಬರೆದಿಲ್ಲ ಎಂದು ಕಿಡಿಕಾರಿದರು.

ಮಂಗಳೂರು ಪಬ್ ಮೇಲೆ ದಾಳಿ ನಡೆಸಿದ್ದು ಶ್ರೀರಾಮ ಸೇನೆ ಕಾರ್ಯಕರ್ತರು. ಆ ಸಂದರ್ಭದಲ್ಲಿ ನಮ್ಮ ಕಾರ್ಯಕರ್ತರ ಮೇಲೆ ಯಾವುದೇ ಗೂಂಡಾ ಕಾಯ್ದೆ ಹಾಕಿರಲಿಲ್ಲ. ಆದರೆ ಹಿಂದೂ ಕಾರ್ಯಕರ್ತರ ವಿರುದ್ಧ ಮೊದಲ ಬಾರಿ ಗೂಂಡಾ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದೇ ಆರ್.ಅಶೋಕ್. ಕಾಂಗ್ರೆಸ್ ನವರು ಯಾವತ್ತೂ ಹಿಂದೂ ಕಾರ್ಯಕರ್ತರ ಮೇಲೆ ಗೂಂಡಾ ಕಾಯ್ದೆಯಡಿ ಪ್ರಕರಣ ದಾಖಲಿಸಿಲ್ಲ. ಈ ವಿಚಾರವನ್ನು ಆರ್.ಅಶೋಕ್ ಗೆ ನಾನೇ ಹೇಳಿದ್ದೆ. ಆದರೆ ಅಶೋಕ್ ಕಾಂಗ್ರೆಸ್ ನವರು ಕೂಡ ಗೂಂಡಾ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ ಎಂದು ಹೇಳಿದ್ದರು. ಈಗ ತಮ್ಮ ಬಾಯಿಯಿಂದಲೇ ಬಣ್ಣ ಬಯಲು ಮಾಡಿಕೊಂಡಿದ್ದಾರೆ ಎಂದು ಕಿಡಿಕಾರಿದ್ದಾರೆ.


## ಬೆಳಗಾವಿ ಜಿಲ್ಲೆಯಲ್ಲಿ ಮತ್ತೊಂದು ಭೀಕರ ಅಪಘಾತ; ಸ್ಥಳದಲ್ಲೇ ಐವರು ಸಾವು

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಶುಕ್ರವಾರ ಎರಡು ಕಡೆ ಭೀಕರ ಅಪಘಾತ ಸಂಭವಿಸಿದ್ದು, ಇಂದು ಸಂಜೆ ಕಾರು ಹಾಗೂ ಬೈಕ್ ಡಿಕ್ಕಿಯಾಗಿ ಐವರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ರಾಯಬಾಗ ತಾಲೂಕಿನ ಮುಗಳಖೋಡ ಕಾಲುವೆ ಬಳಿ ನಡೆದಿದೆ.

ಸಂಜೆ ಜತ್ತ–ಜಾಂಬೋಟಿ ರಸ್ತೆಯಲ್ಲಿ ಈ ಭೀಕರ ಅಪಘಾತ ಸಂಭವಿಸಿದ್ದು, ಚಾಲಕನ ನಿಯಂತ್ರಣ ತಪ್ಪಿ ಕಾರು, ಬೈಕ್‌ಗೆ ಡಿಕ್ಕಿ ಹೊಡೆದ ಬಳಿಕ ಮರಕ್ಕೆ ಡಿಕ್ಕಿ ಹೊಡೆದಿದೆ.

ಮೃತರನ್ನು ಗುರ್ಲಾಪುರದ ನಿವಾಸಿಗಳಾದ ಮಲ್ಲಿಕಾರ್ಜುನ್ ಮರಾಠೆ(16), ಲಕ್ಷ್ಮೀ ಮರಾಠೆ(19), ಆಕಾಶ ಮರಾಠೆ(14), ನಿಪನಾಳ ಗ್ರಾಮದ ಶ್ರೀಕಾಂತ ಪಡತರಿ(22), ಮುಗಳಖೋಡ ಗ್ರಾಮದ ನಾಗಪ್ಪ ಯಡವನ್ನವರ್(48) ಎಂದು ಗುರುತಿಸಲಾಗಿದೆ.

# ದುಬೈನಲ್ಲಿ ಮಂಗಳೂರು ಯುವತಿ ಸಾವು



ಮಂಗಳೂರು: ದುಬೈನಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಮಂಗಳೂರಿನ ಉಳ್ಳಾಲ ಮೂಲದ ಯುವತಿ ಸಾವನ್ನಪ್ಪಿದ್ದಾರೆ.

ಉಳ್ಳಾಲ ತಾಲೂಕಿನ ಕೋಟೆಕಾರ್ ಬೀರಿ ಕೆಂಪುಮಣ್ಣು ನಿವಾಸಿ ವಿದಿಶಾ (28) ವಿಧಿವಶರಾದ ದುರ್ದೈವಿ. ಇವರು ಮಂಗಳೂರು ತಾಲೂಕು ಪಂಚಾಯತ್ ನ ಮಾಜಿ ಉಪಾಧ್ಯಕ್ಷೆ ಬಿಜೆಪಿ ಮುಖಂಡೆ ರಾಜೀವಿ ಹಾಗೂ ವಿಠಲ ಕುಲಾಲ್ ದಂಪತಿಯ ಏಕೈಕ ಪುತ್ರಿ.

ಮಂಗಳೂರಿನ ಸಹ್ಯಾದ್ರಿ ಕಾಲೇಜಿನಲ್ಲಿ ವ್ಯವಹಾರ ಆಡಳಿತ ವಿಭಾಗದಲ್ಲಿ ಸ್ನಾತಕೋತ್ತರ ಪದವಿ ಪಡೆದು ಬಳಿಕ ಬೆಂಗಳೂ–ರಿನ ಖಾಸಗಿ ಕಂಪನಿಯೊಂದರಲ್ಲಿ ಒಂದು ವರ್ಷ ಕೆಲಸ ಮಾಡಿದ್ದರು. ಬಳಿಕ 2019 ರಿಂದ ದುಬೈಗೆ ತೆರಳಿ ಅಲ್ಲಿನ ಏರ್‌ಪೋರ್ಟ್ ನಲ್ಲಿ ಅಧಿಕಾರಿಯಾಗಿ ಕಳೆದ ಐದು ವರ್ಷಗಳಿಂದ ಕೆಲಸ ಮಾಡುತ್ತಿದ್ದರು.

ಪ್ರತಿದಿನ ಕಂಪನಿಯ ಕ್ಯಾಬ್ ನಲ್ಲೇ ಸಂಚರಿಸುತ್ತಿದ್ದ ವಿದಿಶಾ ಕ್ಯಾಬ್ ತಪ್ಪಿದ ಹಿನ್ನೆಲೆಯಲ್ಲಿ ತನ್ನ ಕಾರಿನಲ್ಲೇ ಸಂಚರಿಸುತ್ತಿದ್ದಾಗ ನಿಯಂತ್ರಣ ತಪ್ಪಿ ಡಿವೈಡರ್ ಗೆ ಡಿಕ್ಕಿ ಹೊಡೆದಿದೆ. ಗಂಭೀರವಾಗಿ ಗಾಯಗೊಂಡ ವಿದಿಶಾ ಚಿಕಿತ್ಸೆ ಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

# ರೋಗಿಗಳ ಸುರಕ್ಷತೆ ಮತ್ತು ಡಿಜಿಟಲ್ ಆರೋಗ್ಯ ಉಪಕ್ರಮಗಳಿಗೆ ಸರ್ಕಾರ ಒತ್ತು: ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್



ಬೆಂಗಳೂರು: ಪ್ರತಿಯೊಬ್ಬ–ರಿಗೂ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ದೇಶ ಪ್ರಗತಿ ಸಾಧಿಸಿದ್ದು, ರೋಗಿಗಳ ಸುರಕ್ಷತೆ ಮತ್ತು ಡಿಜಿಟಲ್ ಆರೋಗ್ಯ ಉಪಕ್ರಮಗಳಿಗೆ ಸರ್ಕಾರ ಒತ್ತು ನೀಡಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ, ಪ್ರಧಾನಮಂತ್ರಿ ಕಾರ್ಯಾಲಯದ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ.

ದೇಶದ ಅತಿದೊಡ್ಡ ಆರೋಗ್ಯ ಸೇವೆ ಒದಗಿಸುವ ಅಪಲೋ ಆಸ್ಪತ್ರೆಗಳ ಸಮೂಹದಿಂದ ರೋಗಿಗಳ ರಕ್ಷಣೆ ಕುರಿತ ಸಮ್ಮೇಳನ ಮತ್ತು ಮಾಹಿತಿ ತಂತ್ರಜ್ಞಾನದ ಮೂಲಕ ಆರೋಗ್ಯ ವಲಯದ ಪರಿವರ್ತನೆ ಕುರಿತು ವೈಟ್ ಫೀಲ್ಡ್ ನ ಶೆರಟನ್ ಹೋಟೆಲ್ ನಲ್ಲಿ ಆಯೋಜಿಸಲಾದ ಸಮ್ಮೇಳನದಲ್ಲಿ ಮಾತನಾಡಿದ ಅವರು, ರೋಗಿಗಳ ರಕ್ಷಣೆ ಮತ್ತು ಮಾಹಿತಿ ತಂತ್ರಜ್ಞಾನದ ಮೂಲಕ ಆರೋಗ್ಯ ವಲಯದ ಪರಿವರ್ತನೆ ಕುರಿತ ಚರ್ಚೆ ಅತ್ಯಂತ ಅರ್ಥಪೂರ್ಣವಾದದ್ದು. ಸುರಕ್ಷಿತ ಮತ್ತು ಪರಿಣಾಮಕಾರಿ ಆರೋಗ್ಯ ಪರಿಸರ ವ್ಯವಸ್ಥೆ ರೂಪಿಸಲು ಇದರಿಂದ ಸಹಕಾರಿಯಾಗಲಿದೆ ಎಂದರು.

ಆರೋಗ್ಯ ರಕ್ಷಣೆಯಲ್ಲಿ ತಂತ್ರಜ್ಞಾನ ಕ್ರಾಂತಿಕಾರಕವಾಗಿವೆ. ಆದರೂ ಈ ವಲಯದಲ್ಲಿ ಸಾಕಷ್ಟು ಸವಾಲುಗಳಿವೆ. ಸಮಗ್ರ ಆರೋಗ್ಯ ಕೀಲಿ ಕೈ ಆಗಿದ್ದು, ರೋಗಿಗಳ ಸುರಕ್ಷತೆಯನ್ನು ಪ್ರಧಾನ ಉದ್ದೇಶವಾಗಿಟ್ಟುಕೊಂಡು ಇತ್ತೀಚಿನ ತಂತ್ರಜ್ಞಾನದೊಂದಿಗೆ ಕೇಂದ್ರ ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳನ್ನು ಸಂಯೋಜಿಸಲಾಗಿದೆ ಎಂದು ಡಾ. ಜಿತೇಂದ್ರ ಸಿಂಗ್ ಹೇಳಿದರು.

ಅಪಲೋ ಆಸ್ಪತ್ರೆಗಳ ಸಮೂಹದ ಕಾರ್ಯಕಾರಿ ಉಪಾಧ್ಯಕ್ಷರಾದ ಪ್ರೀತಾ ರೆಡ್ಡಿ ಮಾತನಾಡಿ, "ಇಂದು, ಡಿಜಿಟಲ್ ಮತ್ತು ಟೆಲಿ–ಸೇವೆಗಳು ಆರೋಗ್ಯ ಮುಖ್ಯವಾಹಿನಿಯಲ್ಲಿದ್ದು, ರೋಗಿಗಳ ಸುರಕ್ಷತೆಯ ಮೂಲಭೂತ ಆದ–ರ್ಶಗಳಾಗಿವೆ. ಆರೋಗ್ಯ ವಿತರಣೆಗೆ ನಮ್ಮ ವಿಧಾನ ಪ್ರಸ್ತುತ ಮತ್ತು ಭವಿಷ್ಯದ ಪೀಳಿಗೆಯ ಕ್ರಿಯಾತ್ಮಕ ಅಗತ್ಯಗಳಿಗೆ ಅನುಗುಣವಾಗಿರಬೇಕು. ಭವಿಷ್ಯದ ರೋಗಿಗಳ ಸುರಕ್ಷತಾ ಕ್ರಮಗಳನ್ನು ಸಂಯೋಜಿಸಲು ಇದು ಸಹಾಯ ಮಾಡುತ್ತದೆ ಎಂದರು.

ಜಂಟಿ ವ್ಯವಸ್ಥಾಪಕ ನಿರ್ದೇಶಕರಾದ ಸಂಗೀತಾ ರೆಡ್ಡಿ ಮಾತನಾಡಿ, "ಅಭಿವೃದ್ಧಿ ಹೊಂದಿದ ಭಾರತ ನಿರ್ಮಿಸುವ ನಿಟ್ಟಿನಲ್ಲಿ ದೇಶ ದಾಪುಗಾಲಿಡುತ್ತಿರುವ ಸಂದರ್ಭದಲ್ಲಿ ನಮ್ಮ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ಮತ್ತು ಭವಿಷ್ಯವನ್ನು ಅರಿತುಕೊಳ್ಳಲು ಅಗತ್ಯವಾದ ಹೆಜ್ಜೆ ಇದಾಗಿದೆ. ಅಂತರಾಷ್ಟ್ರೀಯ ಆರೋಗ್ಯ ಸಂವಾದಗಳೊಂದಿಗೆ ನಾವು ಹೊಸ ಪೀಳಿಗೆಯ ಅಗತ್ಯಗಳನ್ನು ಪೂರೈಸುವ ಆರೋಗ್ಯ ವ್ಯವಸ್ಥೆಯನ್ನು ನಿರ್ಮಿಸಲು ಒಟ್ಟಾಗಿ ಕೆಲಸ ಮಾಡುವ ಅಗತ್ಯವಿದೆ ಎಂದರು.

ಇಸ್ರೋ ಅಧ್ಯಕ್ಷ ಎಸ್. ಸೋಮನಾಥ್, ಬಯೋಕಾನ್ ಮುಖ್ಯಸ್ಥರಾದ ಕಿರಣ್ ಮಜುಂದಾರ್ ಶಾ ಮತ್ತು ಬಾಹ್ಯಾಕಾಶದ ಶಾಂತಿಯುತ ಬಳಕೆಗಾಗಿ ವಿಶ್ವ ಸಂಸ್ಥೆ ಸಮಿತಿಯ ಮಾಜಿ ಅಧ್ಯಕ್ಷರಾದ ದುಮಿತ್ರು ಪ್ರುನಾರಿಯು ಅವರು "ಐಟಿಯೊಂದಿಗೆ ಆರೋಗ್ಯ ರಕ್ಷಣೆಯನ್ನು ಪರಿವರ್ತಿಸುವ" ಕುರಿತು ತಮ್ಮ ವಿಚಾರ ಮಂಡಿಸಿದರು.

ಆರೋಗ್ಯ ರಕ್ಷಣೆಯಲ್ಲಿ ಕೃತಕಬುದ್ಧಿಮತ್ತೆ, ಸ್ಮಾರ್ಟ್ ಆಸ್ಪತ್ರೆಗಳು, ರೋಗಿಗಳ ಸುರಕ್ಷತೆ, ಮಾನಸಿಕ ಆರೋಗ್ಯ ಮತ್ತಿತರೆ ವಿಷಯಗಳ ಕುರಿತು ತಜ್ಞರು ಬೆಳಕು ಚೆಲ್ಲಿದರು.

## ಬಸ್ ಹಾಗೂ ವಾಹನ ಸಂಚಾರ ಮಾರ್ಗ ಬದಲಾವಣೆ

ಧಾರವಾಡ: ನವಲಗುಂದದಲ್ಲಿ ಫೆಬ್ರವರಿ 24 ರಂದು ಮುಖ್ಯಮಂತ್ರಿಗಳ ಕಾರ್ಯಕ್ರಮದ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ನಂ.218 ವಿಜಾಪುರ – ಹುಬ್ಬಳ್ಳಿ ಸಂಚಾರ ದಟ್ಟಣೆ ನಿಯಂತ್ರಿಸಲು ಬಾರಿ ಗಾತ್ರದ ವಾಹನಗಳನ್ನು ಅವಶ್ಯಕತೆ ಆಗಿರುವುದರಿಂದ ಈ ಸಂಚಾರ ಮಾರ್ಗ ಬದಲಾವಣೆ ಜಿಲ್ಲಾಧಿಕಾರಿಗಳಾದ ದಿವ್ಯ ಪ್ರಭು ಅವರು ಆದೇಶ ವರದಿಸಿದ್ದರೆ.

ಫೆಬ್ರವರಿ 24 ಬೆಳಿಗ್ಗೆ 10 ಗಂಟೆಯಿಂದ ರಾತ್ರಿ 9 ಗಂಟೆಯವರೆಗೆ ಮಾರ್ಗ ಸಂಚಾರ ಬದಲಾವಣೆ ಈ ರೀತಿಯಾಗಿದೆ.

ಹುಬ್ಬಳ್ಳಿ ಕಡೆಯಿಂದ ಬರುವ ಭಾರೀ ಗಾತ್ರದ ವಾಹನಗಳನ್ನು ಕುಸುಗಲ್ಲಿಂದ ಬ್ಯಾಹಟ್ಟಿ, ತಿರ್ಲಾಪೂರ, ಹಾಳಕುಸುಗಲ್ ಕ್ರಾಸ್, ಅಳಗವಾಡಿ ಮಾರ್ಗವಾಗಿ ನರಗುಂದ ಕಡೆಗೆ ಹೋಗುವುದು. ವಿಜಯಪೂರ ಕಡೆಯಿಂದ ಬರುವ ಭಾರೀ ಗಾತ್ರದ ವಾಹನಗಳನ್ನು ನರಗುಂದದಿಂದ, ಅಳಗವಾಡಿ, ತಿರ್ಲಾಪೂರ, ಬ್ಯಾಹಟ್ಟಿ, ಕುಸುಗಲ್ ಮಾರ್ಗವಾಗಿ ಹುಬ್ಬಳ್ಳಿ ಕಡೆಗೆ ಹೋಗುವುದು. ಹುಬ್ಬಳ್ಳಿ ಕಡೆಯಿಂದ ಬರುವ ಬಸ್ಸಗಳನ್ನು ಯಮನೂರದಿಂದ, ತಿರ್ಲಾಪೂರ, ಹಾಳಕುಸುಗಲ್ ಕ್ರಾಸ್, ಅಳಗವಾಡಿ, ಗೊಬ್ಬರಗುಂಪಿ, ಗೊಬ್ಬರಗುಂಪಿ ಕ್ರಾಸ್ ಮೂಲಕ ನರಗುಂದ ಕಡೆಗೆ ಹೋಗುವುದು. ವಿಜಯಪೂರ ಕಡೆಯಿಂದ ಬರುವ ಬಸ್ಸಗಳನ್ನು ಗೊಬ್ಬರಗುಂಪಿ ಕ್ರಾಸ್, ಗೊಬ್ಬರಗುಂಪಿ, ಅಳಗವಾಡಿ. ಹಾಳಕುಸುಗಲ್ ಕ್ರಾಸ್, ತಿರ್ಲಾಪೂರ, ಯಮನೂರ ಮಾರ್ಗವಾಗಿ ಹೋಗುವುದು. ಅಣ್ಣಿಗೇರಿ ಕಡೆಯಿಂದ ಬರುವ ಭಾರೀ ಗಾತ್ರದ ವಾಹನಗಳನ್ನು ಹಳ್ಳಿಕೇರಿ, ನಾವಳ್ಳಿ, ಶಲವಡಿ, ತಡಹಾಳ, ನರಗುಂದ ಮಾರ್ಗವಾಗಿ ಹೋಗುವುದು.

## ಫೆ.24 ರಂದು ನವಲಗುಂದದಲ್ಲಿ ಮುಖ್ಯಮಂತ್ರಿಗಳಿಂದ ವಿವಿಧ ಕಾರ್ಯಕ್ರಮಗಳು

ಧಾರವಾಡ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಸಹಯೋಗದಲ್ಲಿ ನವಲಗುಂದ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಗೆ ಒಳಪಡುವ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ, ಗ್ಯಾರೆಂಟಿ ಯೋಜನೆಗಳ ಸಮಾವೇಶ ಹಾಗೂ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಹಕ್ಕುಪತ್ರಗಳ ವಿತರಣೆ ಕಾರ್ಯಕ್ರಮವನ್ನು ಫೆ. 24, 2024 ರಂದು ಸಂಜೆ 4 ಗಂಟೆಗೆ ನವಲಗುಂದದ ಮಾಡೆಲ್ ಹೈಸ್ಕೂಲ್ ಆವರಣದಲ್ಲಿ ಆಯೋಜಿಸಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಮತ್ತು ಗಣಿ ಸಚಿವ ಪ್ರಲ್ಹಾದ ಜೋಶಿ, ವಿಧಾನ ಪರಿಷತ್ತ ಸಭಾಪತಿ ಬಸವರಾಜ ಹೊರಟ್ಟಿ ಮತ್ತು ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ ಕಾರ್ಯಕ್ರಮದಲ್ಲಿ ಘನ ಉಪಸ್ಥಿತರಿರುವರು. ಶಾಸಕರಾದ ಎನ್. ಎಚ್. ಕೋನರಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮತ್ತು ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ, ಗೃಹ ಸಚಿವ ಡಾ. ಜಿ.ಪರಮೇಶ್ವರ, ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತವಾರಿ ಸಚಿವ ಸಂತೋಷ್ ಎಸ್. ಲಾಡ್, ಇಂಧನ ಸಚಿವ ಕೆ.ಜೆ.ಪಾಟೀಲ, ಭಾರಿ ಮತ್ತು ಮಾಧ್ಯಮ ಕೈಗಾರಿಕೆ, ಮೂಲಭೂತ ಸೌಕರ್ಯ ಸಚಿವ ಎಂ.ಬಿ.ಪಾಟೀಲ, ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ ಗುಂಡೂರಾವ್, ವಸತಿ ಹಾಗೂ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಬಿ. ಝಡ್. ಜಮೀರ ಅಹ್ಮದ್ ಖಾನ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವ ಪ್ರಿಯಾಂಕ ಖರ್ಗೆ,ಕಂದಾಯ ಸಚಿವ ಕೃಷ್ಣ ಭೈರೇಗೌಡ, ಪಶುಸಂಗೋಪನೆ ಹಾಗೂ ರೇಗಷ್ಮ ಇಲಾಖೆ ಸಚಿವ ಕೆ. ವೆಂಕಟೇಶ,ಪೌರಾಡಳಿತ ಮತ್ತು ಹಜ್ ಇಲಾಖೆ ಸಚಿವ ರಹೀಂಖಾನ್, ಕೃಷಿ ಇಲಾಖೆ ಸಚಿವ ಎನ್. ಚೆಲುವರಾಸ್ವಾಮಿ, ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವ ಸುರೇಶ ಬಿ.ಎಸ್, ಯುವಜನ ಸೇವೆ,ಕ್ರೀಡೆ ಮತ್ತು ಪರಿಶಿಷ್ಟ ಪಂಗಡ ಕಲ್ಯಾಣ ಸಚಿವ ಬಿ.ನಾಗೇಂದ್ರ , ಹಿಂದುಳಿದ ವರ್ಗ, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ ಸಚಿವ ತಂಗಡಗಿ ಶಿವಾರಜ ಸಂಗಪ್ಪ , ಉನ್ನತ ಶಿಕ್ಷಣ ಇಲಾಖೆ ಸಚಿವ ಎಂ.ಸಿ.ಸುಧಾಕರ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಸಚಿವ ಮಧು ಬಂಗಾರಪ್ಪ ,ಮಹಿಳಾ ಮತ್ತು ಮಕ್ಕಳ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಮಾಜಿ ಮುಖ್ಯಮಂತ್ರಿಗಳಾದ ಜಗದೀಶ್ ಶೆಟ್ಟರ, ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್. ಭೋಸರಾಜು, ವಾಯುವ್ಯ ಸಾರಿಗೆ ನಿಗಮದ ಅಧ್ಯಕ್ಷ ಹಾಗೂ ಶಾಸಕರಾದ ಭರಮಗೌಡ ಅಲಗೌಡ ಕಾಗೆ, ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಹಾಗೂ ಹುಬ್ಬಳ್ಳಿ–ಧಾರವಾಡ ಶಾಸಕರಾದ ಅಬ್ಬಯ್ಯ ಪ್ರಸಾದ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ವಿನಯ ಕುಲಕರ್ಣಿ, ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಹಾಗೂ ಶಾಸಕ ಬಿ.ಕೆ.ಸಂಗಮೇಶ್ವರ, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕರಾದ ಜೆ.ಎಂ.ಗಣೇಶ್, ಮಹೇಶ್ ಟೆಂಗಿನಕಾಯಿ, ಪ್ರದೀಪ್ ಶೆಟ್ಟರ್, ಎಸ್.ವಿ.ಸಂಕನೂರು, ಎಂ.ಆರ್.ಪಾಟೀಲ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

## ಧಾರವಾಡ ಕರ್ನಾಟಕ ಲೋಕಾಯುಕ್ತ ಪೊಲೀಸ್; ಫೆ. 27 ರಂದು ಕಲಘಟಗಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕಾರ

ಧಾರವಾಡ: ಧಾರವಾಡ ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಕಚೇ–ರಿಯ ಪೊಲೀಸ್ ಅಧಿಕಾರಿಗಳು, ಸಾರ್ವಜನಿಕ ಕುಂದು ಕೊರತೆ ಸಭೆಯನ್ನು ಕಲಘಟಗಿ ತಾಲೂಕು ಪಂಚಾಯತ ಕಾರ್ಯಾಲಯ ಸಭಾಭವನದಲ್ಲಿ ಫೆಬ್ರವರಿ 27 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಜರುಗಿಸಲಿದ್ದಾರೆ. ಸಭೆಯಲ್ಲಿ ಸಾರ್ವಜನಿಕರಿಂದ ಕುಂದು ಕೊರತೆ, ಅಹವಾಲುಗಳನ್ನು ಸ್ವೀಕ–ರಿಸಲಾಗುವುದು. ತಾಲೂಕಿನ ಸಾರ್ವಜನಿಕರು ಈ ಸಭೆಯ ಸದುಪ ಯೋಗಪಡೆದುಕೊಳ್ಳಬೇಕೆಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ

ಧಾರವಾಡ: ರಾಜ್ಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು 1000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇರ ನೇಮಕಾತಿಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಈ ಹುದ್ದೆಗಳ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು. ಮಾರ್ಚ್ 3, 2024 ರಿಂದ ಎಪ್ರಿಲ್ 3, 2024 ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅಭ್ಯರ್ಥಿಗಳ ಅರ್ಹತೆ, ವಯೋಮಿತಿ, ಸ್ಪರ್ಧಾತ್ಮಕ ಪರೀಕ್ಷೆ, ಆಯ್ಕೆ ಪ್ರಕ್ರಿಯೆ ಮತ್ತು ನೇಮಕಾತಿಯ ವಿವರ ಹಾಗೂ ಪ್ರವರ್ಗವಾರು ಮತ್ತು ಜಿಲ್ಲಾವಾರು ಹುದ್ದೆಗಳ ವಿವರವನ್ನು ಹಾಗೂ ಇನ್ನಿತರ ಮಾಹಿತಿಗಾಗಿ ಕೆಇಎ ವೆಬ್ಸೈಟ್ ಃಣಣಠಿ://ಞಜಚಿ.ಞಚಿಡಿ.ಟುಥಿ.ಟಿ ನಲ್ಲಿ ನೋಡಬಹುದು. ಧಾರವಾಡ ಜಿಲ್ಲೆಯ ಅಭ್ಯರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳಾದ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳು ಬಾಲ ನಟ, ನಟಿಯಾಗಿ ನಟನಾ ಕೆಲಸ ಮಾಡಲು ಅನುಮತಿ ಕಡ್ಡಾಯ

ಬಳ್ಳಾರಿ: ಜಿಲ್ಲೆ ವ್ಯಾಪ್ತಿಯಲ್ಲಿ ಮಕ್ಕಳು ಬಾಲ ನಟ ಮತ್ತು ನಟಿಯಾಗಿ ನಟನಾ ಕೆಲಸ ಮಾಡಲು ಇಚ್ಛಿಸಿದಲ್ಲಿ ಕಡ್ಡಾಯವಾಗಿ ಅನುಮತಿ ಪಡೆಯಬೇಕು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.



ರಾಜ್ಯದಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ತಿದ್ದುಪಡಿ ಕಾಯ್ದೆ 2016 ರನ್ವಯ ಮಕ್ಕಳ ಶಿಕ್ಷಣದ ಹಕ್ಕಿಗೆ ಮಾರಕವಾಗದಂತೆ ಬಾಲ ನಟ ಹಾಗೂ ನಟಿಯಾಗಿ ನಟನಾ ಕೆಲಸ ನಿರ್ವಹಿಸುವ ಚಟುವಟಿಕೆಗಳನ್ನು ಹೊರತುಪಡಿಸಿ, ಕಾಯ್ದೆಯು ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ ಹಾಗೂ ಕಾಯ್ದೆಯು 14–18ರ ವಯಸ್ಸಿನ ಕಿಶೋರ ಕಾರ್ಮಿಕರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕಿಶೋರವಸ್ಥೆಯ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಅವರು ಪ್ರಕಟಣೆಯಲ್ಲಿ ಹೇಳಿದ್ದಾರೆ.

ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಂಡಲ್ಲಿ ಮೊದಲ ಅಪರಾದಕ್ಕೆ ತಪ್ಪಿತಸ್ಥ ಮಾಲೀಕ–ರಿಗೆ 6 ತಿಂಗಳಿನಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ರೂ.20,000 ರಿಂದ ರೂ.50,000 ರವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಪುನರಾವರ್ತಿತ ಅಪರಾಧಕ್ಕೆ 1 ವರ್ಷದಿಂದ 3 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿದೆ.

ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕರ್ನಾಟಕ ನಿಯಮಗಳು '2ಸಿ' ರಲ್ಲಿ ಒಬ್ಬ ಕಲಾವಿದನಾಗಿ ಕೆಲಸ ಮಾಡಬೇಕಾದ ಮಗು (1) ಕಲಂ 3ರ ನಿಬಂಧನೆಗಳನ್ವಯ ಕೆಳಗಿನ ನಿಯಮಗಳಿಗೆ ಒಳಪಟ್ಟಂತೆ ಮಗು ಕಲಾವಿದನಾಗಿ ಕೆಲಸ ಮಾಡಲು ಅನುಮತಿಸಬಹುದಾಗಿದೆ ಅವುಗಳು ಈ ಕೆಳಕಂಡಂತಿವೆ:

ಯಾವುದೇ ಮಗುವನ್ನು ಒಂದು ದಿನದಲ್ಲಿ 5 ಗಂಟೆಗಳಿಗಿಂತ ಹೆಚ್ಚಿನ ಅವಧಿಗೆ ನಟನಾ ಕೆಲಸಕ್ಕೆ ನಿಯೋಜಿಸುವಂತಿಲ್ಲ ಮತ್ತು ವಿಶ್ರಾಂತಿ ಇಲ್ಲದೇ 3 ಗಂಟೆಗಳಿಗಿಂತ ಹೆಚ್ಚು ಕೆಲಸ ಮಾಡಿಸುವಂತಿಲ್ಲ.

ಶ್ರವಣ ಮತ್ತು ದೃಶ್ಯ ಮಾಧ್ಯಮದ ಯಾವುದೇ ನಿರ್ಮಾಪಕರು ನಿರ್ಮಿಸಿದ ಅಥವಾ ಯಾವುದೇ ವಾಣಿಜ್ಯ ಪರ ಕಾರ್ಯಕ್ರಮದಲ್ಲಿ ಮಗು ಭಾಗವಹಿಸುವುದಿದ್ದರೆ, ಆ ಚಟುವಟಿ–ಕೆ ನಡೆಯುವ ಪ್ರದೇಶದ ಜಿಲ್ಲಾ ದಂಡಾಧಿಕಾರಿಗಳ ಪೂರ್ವಾನುಮತಿ ಪಡೆದು ಭಾಗವಹಿಸುವಂತೆ ಮಾಡುವುದು ಮತ್ತು ಚಟುವಟಿಕೆ ಪ್ರಾರಂಭಿಸುವ ಪೂರ್ವದಲ್ಲಿ ನಮೂನೆ 'ಸಿ' ಯಲ್ಲಿ ಜಿಲ್ಲಾ ದಂಡಾಧಿಕಾರಿಗೆ ಮುಚ್ಚಳಿಕೆ ಪತ್ರ ಸಲ್ಲಿಸಬೇಕು. ಭಾಗವಹಿಸುವ ಮಕ್ಕಳ ಪಟ್ಟಿ ಪೇಷಕರ ಅಥವಾ ಪಾಲಕರ ಒಪ್ಪಿಗೆ ಪತ್ರ ಸಲ್ಲಿಸಬೇಕು ಎಂದು ಡಿಸಿಯವರು ತಿಳಿಸಿದ್ದಾರೆ.

ಮಗುವಿನ ಸಂರಕ್ಷತೆಗೆ ಸಂಬಂಧಿಸಿದಂತೆ, ನಿರ್ಮಾಕರ ಅಥ–'ವಾ ಸಮಾರಂಭದ ಆಯೋಜಕರ ಹೆಸರುಗಳನ್ನು ಒದಗಿಸಬೇಕು. ಮಕ್ಕಳನ್ನು ಬಳಸಿ ಸಂಪೂರ್ಣ ಚಿತ್ರೀಕರಣ ಮಾಡುವ ಸಂದರ್ಭದಲ್ಲಿ ಮಕ್ಕಳ ದುರುಪಯೋಗ ಪ್ರಕರಣ, ನಿರ್ಲಕ್ಷ್ಯ ಅಥವಾ ಶೋಷಣೆ ನಡೆಯದಂತೆ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿರಬೇಕೆಂದು ಚಲನಚಿತ್ರಗಳ ಅಥವಾ ದೂರದರ್ಶನದ ಪ್ರದರ್ಶನದ ಹಕ್ಕು ನಿರಾಕರಣೆಗೆ ಒಳಪಟ್ಟಿದೆ ಎಂಬುದನ್ನು ನಿರ್ಮಾಪಕರಿಗೆ ಖಚಿತ ಪಡಿಸುವುದು.

ಕಲಂ 'ಬಿ' ಯಲ್ಲಿ ಉಲ್ಲೇಖಿಸಿರುವ ಮುಚ್ಚಳಿಕೆಯು 6 ತಿಂಗಳುಗಳವರೆಗೆ ಮಾನ್ಯವಾಗಿರುತ್ತದೆ ಮತ್ತು ಶಿಕ್ಷಣ–ಕ್ಕೆ ಸಂಬಂಧಿಸಿದ ನಿಬಂಧನೆಗಳನ್ನು ಸುರಕ್ಷತೆ ಮತ್ತು ಮಕ್ಕಳ ದುರುಪಯೋಗ ತಡೆ ಕುರಿತಾದ ಮಾನ್ಯತೆ ಪಡೆದ ಮಾರ್ಗಸೂಚಿಗಳು ಮತ್ತು ಇಂತಹ ಉದ್ದೇಶಗಳಿಗಾಗಿ ಸೂಕ್ತ ಸರ್ಕಾರವು ನಿಗಧಿತವಾಗಿ ಹೊರಡಿಸಿರುವ ಸುರಕ್ಷತಾ ನೀತಿಗಳನ್ನು ಅಳವಡಿಸಿಕೊಂಡಿರುವ ಬಗ್ಗೆ ಸ್ಪಷ್ಟವಾಗಿ ತಿಳಿಸಬೇಕು.

ಮಗುವಿನ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಲು ಖಾತ್ರಿಪಡಿಸಿಕೊಳ್ಳಬೇಕು. ಮಗುವಿಗೆ ಸಕಾಲಿಕ ಪೌಷ್ಠಿಕ ಆಹಾರ ಒದಗಿಸಬೇಕು. ದೈನಂದಿನ ಅಗತ್ಯಗಳಿಗೆ ಸಾಕಾಗುವಷ್ಟು ಸಾಮಾಗ್ರಿಗಳು, ಸ್ವಚ್ಚ ಮತ್ತು ಸುರಕ್ಷಿತವಾದ ಆಶ್ರಯ ಒದಗಿಸುವುದು.

ಶಿಕ್ಷಣದ ಹಕ್ಕು ಸಂರಕ್ಷಣೆ, ಲೈಂಗಿಕ ಅಪರಾಧಗಳಿಂದ ರಕ್ಷಣೆ ಒಳಗೊಂಡಂತೆ ಮಕ್ಕಳ ರಕ್ಷಣೆ ಕುರಿತಾಗಿ ಕಾಲ ಕಾಲಕ್ಕೆ ಜಾರಿಯಲ್ಲಿರುವ ಎಲ್ಲಾ ಕಾನೂನುಗಳ ಪಾಲನೆ ಮಾಡಬೇಕು.

ಮಗು ಶಾಲೆಯ ಪಾಠ ಪ್ರವಚನಗಳಿಗೆ ಗೈರಾಗದಂತೆ ಶಿಕ್ಷಣದಲ್ಲಿ ನಿರಂತರವಾಗಿ ಮುಂದುವರೆಯಲು ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸುವುದನ್ನು ಖಾತ–ರಿಪಡಿಸಿಕೊಳ್ಳಬೇಕು. ಯಾವುದೇ ಮಗು ನಿರಂತರವಾಗಿ 27 ದಿನಗಳಿಗಿಂತ ಹೆಚ್ಚಿನ ದಿನಗಳು ನಟನಾ ಕೆಲಸದಲ್ಲಿ ತೊಡಗಲು ಅವಕಾಶ ನೀಡಬಾರದು ಎಂದೂ ತಿಳಿಸಿದ್ದಾರೆ.

ಮಗುವಿನ ರಕ್ಷಣೆ, ಪೇಷಣೆ ಮತ್ತು ಹಿತಾಸಕ್ತಿಯನ್ನು ಕಾಪಾಡಲು ನಿರ್ಮಾಣ ಅಥವಾ ಕಾರ್ಯಕ್ರಮದಲ್ಲಿ ತೊಡಗಿರುವ ಪ್ರತಿ 5 ಮಕ್ಕಳಿಗೆ ಒಬ್ಬರಂತೆ ಜವಾಬ್ದಾರಿ ವ್ಯಕ್ತಿಯನ್ನು ನೇಮಿಸಬೇಕು.

ನಿರ್ಮಾಣ ಅಥವಾ ಕಾರ್ಯಕ್ರಮದಿಂದ ಮಗುವಿಗೆ ಬರುವ ಒಟ್ಟು ಆದಾಯದ ಕನಿಷ್ಠ ಶೇ.20 ನ್ನು ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಮಗುವಿನ ಹೆಸರಿನಲ್ಲಿ ನಿಶ್ಚಿತ ಠೇವಣಿ ಖಾತೆ ತೆರೆದು ಇಡಬೇಕು. ಅದನ್ನು ಮಗು ಪ್ರಾಯಸ್ಥನಾದಾಗ ಪಡೆಯಲು ಅವಕಾಶ ಕಲ್ಪಿಸಬೇಕು.

ಯಾವುದೇ ಮಗುವಿನ ಒಪ್ಪಿಗೆ ಮತ್ತು ಇಚ್ಚೆಗೆ ವಿರುದ್ಧವಾಗಿ ಯಾವುದೇ ಧ್ವನಿ, ದೃಶ್ಯ ಮತ್ತು ಕ್ರೀಡಾ ಚಟುವಟಿ–ಕೆಗಳ ಅನೌಪಾಚಾರಿಕ ಮನರಂಜನಾ ಚಟುವಟಿಕೆಗಳ ನ್ನೊಳಗೊಂಡಂತೆ ಭಾಗವಹಿಸುವಂತಿಲ್ಲಾ.

ಮೇಲ್ಕಂಡಂತೆ ಕೇಂದ್ರ ಸರ್ಕಾರದ ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕರ್ನಾಟಕ ನಿಯಮಗಳು 2ಸಿ ರಲ್ಲಿ ಒಬ್ಬ ಕಲಾವಿದನಾಗಿ ಕೆಲಸ ಮಾಡಬೇಕಾದ ಮಗು (1) ಕಲಂ 3ರ ನಿಬಂಧನೆಗಳ ವಿಷಯದಲ್ಲಿ ಮೇಲ್ಕಂಡ ಪರಿಸ್ಥಿತಿಗಳಿಗೆ / ನಿಯಮಗಳಿಗೆ ಒಳಪಟ್ಟಂತೆ ಮಗುವನ್ನು ಕಲಾವಿದನಾಗಿ ನಟನಾ ಕೆಲಸ ಮಾಡಲು ಅನುಮತಿಸಲಾಗುವುದು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಸಂವಿಧಾನದ ಮಹತ್ವ ಜನ ಸಾಮಾನ್ಯರಿಗೆ ಸಾರಬೇಕು: ಪಿ.ಎಸ್.ಹಟ್ಟಪ್ಪ

ಬಳ್ಳಾರಿ: ಜಿಲ್ಲೆಯಲ್ಲಿ ನಡೆಯುತ್ತಿರುವ "ಸಂವಿಧಾನ ಜಾಗೃತಿ ಜಾಥಾ" ಕಾರ್ಯಕ್ರಮದ ಅಂಗವಾಗಿ ಜಾಥ–ಾವು ಸಂಡೂರು ಗುರುವಾರದಂದು ತಾಲ್ಲೂಕಿನ ಎಚ್.ಕೆ.ಹಳ್ಳಿ, ಕಾಳಿಂಗೇರಿ, ಅಗ್ರಹಾರ ಹಾಗೂ ಸೋವೇನಹಳ್ಳಿ ಗ್ರಾಮ ಪಂಚಾಯಿತಿಗಳ ಮಾರ್ಗದಲ್ಲಿ ಸಂಚರಿಸಿ, ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಿತು.



ಪ್ರತಿ ಗ್ರಾಮಗಳಲ್ಲಿ ಜಾಥಾವನ್ನು ಕಳಶ ಹಿಡಿದ ಮತ್ತು ಪೂರ್ಣ ಕುಂಭ ಹೊತ್ತ ಮಹಿಳೆಯರು, ನೇತಾರರ ವೇಷ ಭೂಷಣ ಧರಿಸಿದ ವಿದ್ಯಾರ್ಥಿಗಳು, ಕೋಲಾಟದ ಮೂಲಕ ನೃತ್ಯ, ಹಲಗೆ ಮತ್ತು ಡೊಳ್ಳು ಕಲಾವಿದರು, ತಾಷಾ ರಾಂಡೋಲ್, ಕಂಸಾಳೆ ಹಾಗೂ ನಂದಿ ಕೋಲು ಕುಣಿತದ ಕಲಾವಿದರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು, ಜನಪ್ರತಿನಿಧಿಗಳು, ಊರಿನ ಮುಖಂಡರು ಹಾಗೂ ಸಾರ್ವಜನಿಕರು ಅದ್ದೂರಿಯಾಗಿ ಸ್ವಾಗತಿಸಿದರು.

ಪ್ರಥಮವಾಗಿ ಜಾಥಾವನ್ನು ಎಚ್. ಕೆ.ಹಳ್ಳಿ(ಹಿರೇಕೆರೆಯಾಗಿನಹಳ್ಳಿ) ಗಾಮದಲ್ಲಿ ವಿವಿಧ ವೇಷ ಭೂಷಣಗಳನ್ನು ಧರಿಸಿದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ವಿವಿಧ ವಾದ್ಯಗಳೊಂದಿಗೆ ಅದ್ದೂರಿಯಾಗಿ ಸ್ವಾಗತಿಸಿದರು.

ಜಾಥಾದಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಹಟ್ಟೆಪ್ಪ.ಪಿ.ಎಸ್ ಅವರು ಭಾಗವಹಿಸಿ ಮಾತನಾಡಿ, ಸಂವಿಧಾನದ ರಕ್ಷಣೆಯು ನಮ್ಮೆಲ್ಲರ ಜವಾಬ್ದಾ–ರಿಯಾಗಿದೆ.

ಸಂವಿಧಾನದ ಬಗ್ಗೆ ಎಲ್ಲರಲ್ಲೂ ತಿಳುವಳಿಕೆ ಮೂಡಿಸಿ, ಸಂವಿಧಾನದ ಮಹತ್ವವನ್ನು ಜನ ಸಾಮಾನ್ಯರಿಗೆ ಸಾರಬೇಕು ಎಂದು ಅಭಿಪ್ರಾಯಪಟ್ಟರು.

ಮುಖಂಡರಾದ ಕರಿಬಸಪ್ಪ ರವರು ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಹೆಣ್ಣು ಮಕ್ಕಳಿಗೆ ಸ್ವಾತಂತ್ರ್ಯವನ್ನು ನೀಡಿದುದಲ್ಲದೆ, ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರಾಧಾನ್ಯತೆ ನೀಡಿದರು ಎಂದು ಹೇಳಿದರು.

ಕಾಳಿಂಗೇರಿ ಗ್ರಾಮದಲ್ಲಿ ಮಕ್ಕಳ ಕೋಲಾಟ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಕಿರು ನಾಟಕದ ಮೂಲಕ ಅದ್ದೂರಿಯಾದ ಸ್ವಾಗತ ದೊರೆಯಿತು.

ನಂತರ ಅಗ್ರಹಾರ ಗ್ರಾಮದಲ್ಲಿ ಶಿಕ್ಷಕರಾದ ನಾಗರಾಜ ಅವರು ಮಾತನಾಡಿ, ನಾವೆಲ್ಲರೂ ಸಂವಿಧಾನದ ಮೂಲಭೂತ ಕಾನೂನುಗಳನ್ನು, ಮೂಲಭೂತ ಹಕ್ಕುಗಳನ್ನು ಹಾಗೂ ಮೂಲಭೂತ ಕರ್ತವ್ಯಗಳನ್ನು ತಿಳಿದುಕೊಳ್ಳಬೇಕು. ಸರ್ಕಾರ ನಮಗೆ ಮೂಲಭೂತ ಸೌಲಭ್ಯಗಳನ್ನು ಎನ್ನುವುದರ ಜೊತೆಗೆ ನಾವು ದೇಶಕ್ಕೆ ಏನು ಕೊಟ್ಟಿದ್ದೇವೆ ಎಂಬುದರ ಬಗ್ಗೆ ಚಿಂತಿಸಬೇಕಿದೆ ಎಂದು ಹೇಳಿದರು.

ಸೋವೇನಹಳ್ಳಿ ಗ್ರಾಮದಲ್ಲಿ ಬೈಕ್ ರ್ಯಾಲಿ ನಡೆಸಿದ್ದು ವಿಶೇಷವಾಗಿತ್ತು.

ಎಲ್‌ಇಡಿ ಪರದೆಯ ಮೂಲಕ ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು ಮತ್ತು ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಯಿತು.

ಜಾಥಾ ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ವರ್ಗದವರು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

## ಯುವತಿ ಕಾಣೆ: ಪತ್ತೆಗೆ ಮನವಿ



ಬಳ್ಳಾರಿ: ಸಂಡೂರು ಪಟ್ಟಣದ 04 ನೇ ವಾರ್ಡ್ ಅಶೋಕ್ ಡೈರಿ ಫಾರಂ ಹತ್ತಿರದ ನಿವಾಸಿಯಾದ ಅಪೂರ್ವ ತಂದೆ ಜೆ.ಪ್ರಕಾಶ ಎನ್ನುವ 18 ವರ್ಷದ ಯುವತಿಯು ಫೆ.15 ರಂದು ಮನೆಯಿಂದ ಹೊರಗಡೆ ಹೋಗಿಬರುವುದಾಗಿ ಹೇಳಿ, ಮರಳಿ ಬಾರದೇ ಕಾಣೆಯಾಗಿರುವ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಸಂಡೂರು ಪೊಲೀಸ್ ಠಾಣೆಯ ಠಾಣಾಧಿಕಾರಿ ಅವರು ಮನವಿ ಮಾಡಿದ್ದಾರೆ.

ಚಹರೆ ಗುರುತು: ಎತ್ತರ 5.2 ಅಡಿ, ಸಾಧಾರಣ ಮೈಕಟ್ಟು, ಕೋಲು ಮುಖ, ಗೋಧಿ ಮೈಬಣ್ಣ, ತಲೆಯಲ್ಲಿ ಸುಮಾರು 12 ಇಂಚು ಉದ್ದದ ಕಪ್ಪು ಕೂದಲು ಹೊಂದಿದ್ದು, ಎಡತುಟಿಯ ಮೇಲೆ ಒಂದು ಸಣ್ಣ ಕಪ್ಪು ಮಚ್ಚೆ ಇರುತ್ತದೆ. ಕಾಣೆಯಾದ ಸಂದರ್ಭದಲ್ಲಿ ಕಪ್ಪು ಟೀ–ಶರ್ಟ, ಬಿಳಿ ಮಿಶ್ರಿತ ತುಂಬು ತೋಳಿನ ಜಾಕೆಟ್, ನೀಲಿ ಜೀನ್ಸ್ ಪ್ಯಾಂಟ್ ಧರಿಸಿದ್ದು, ಕನ್ನಡ ಮತ್ತು ಇಂಗ್ಲೀಷ್ ಭಾಷೆ ಮಾತನಾಡುತ್ತಾಳೆ. ಯುವತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಸಂಡೂರು ಪೊಲೀಸ್ ಠಾಣೆಯ ಪಿಎಸ್ಐ ಅವರ ಮೊ.9480803061 ಗೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

## ಕೂಸಿನ ಮನೆ ಆರೈಕೆದಾರರಿಗೆ ಕ್ಷೇತ್ರ ಭೇಟಿ




ಹುಕ್ಕೇರಿ : ತಾಲೂಕಿನ ಕೊಟಬಾಗಿ ಗ್ರಾಮ ಪಂಚಾಯತಿಯ ರಕ್ಷಿ ಗ್ರಾಮದಲ್ಲಿ ಕೂಸಿನ ಮನೆಗೆ ತರಬೇತಿಯ ಆರೈಕೆದಾರರಿಗೆ ಕ್ಷೇತ್ರ ಭೇಟಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಉದ್ಯೋಗ ಖಾತರಿ ಯೋಜನೆ ಸಹಾಯಕ ನಿರ್ದೇಶಕ ಲಕ್ಷ್ಮೀ ನಾರಾಯಣ ಮಾತನಾಡಿ, ಮಕ್ಕಳ ಆರೈಕೆ ವಿಚಾರದಲ್ಲಿ ಆರೈಕೆದಾರರು ಜವಾಬ್ದಾರಿ ನಿರ್ವಹಿಸಬೇಕು. ವೇಳಾಪಟ್ಟಿ ಅನ್ವಯ ಆಹಾರ ವಿತರಿಸಬೇಕು. ಸ್ವಚ್ಚತೆಗೆ ಆದ್ಯತೆ ನೀಡಬೇಕು. ಪಂಚಾಯಿತಿಯೊಂದಿಗೆ ಸಮನ್ವಯ ಸಾಧಿಸಬೇಕು. ಮನೆ ಮನೆಗೆ ತೆರಳಿ ಕೂಸಿನ ಮನೆಗೆ ಬರುವ ಮಕ್ಕಳ ಸಮೀಕ್ಷೆ ನಡೆಸಬೇಕು ಎಂದರು. ಕೂಸಿನ ಮನೆ ನೋಡಲ್ ಅಧಿಕಾರಿ ರಾಜು ಢಾಂಗೆ ಮಾತನಾಡಿ, ಕೂಲಿ ಕಾರ್ಮಿಕರ ಮಕ್ಕಳನ್ನು ಕೂಸಿನ ಮನೆಗಳಲ್ಲಿ ಪಾಲನೆ ಮಾಡಬೇಕಾಗಿದೆ. ಹಾಗಾಗಿ ತಾವುಗಳು ತರಬೇತಿ ಪಡೆದುಕೊಂಡು ಕೂಸಿನ ಮನೆಗಳನ್ನು ಯಶಸ್ವಿಯಾಗಿ ನಡೆಸಬೇಕು. ಮಕ್ಕಳ ದಾಖಲಾತಿ ರಜಿಸ್ಟರ ಕಟ್ಟುನಿಟ್ಟಾಗಿ ನಿರ್ವಹಿಸಬೇಕು. ಮುಂಜಾನೆ ಮತ್ತು ಸಂಜೆ ಪೋಷಕರ ಸಹಿ ಮಾಡಿಸಿಕೊಳ್ಳಬೇಕು ಎಂದರು.

# ಸಂವಿಧಾನ ಜಾಗೃತಿ ಅಭಿಯಾನದ ಎರಡು ಇವೆಂಟ್ ಇಂಡಿಯನ್ ಬುಕ್ ಆಫ್ ರೆಕಾರ್ಡ್ಗೆ ಸೇರ್ಪಡೆ; ಜಿಲ್ಲೆಯಲ್ಲಿ 1,528 ಕೀ.ಮಿ ಸಂಚರಿಸಿ, ಸಾರ್ವಜನಿಕರಲ್ಲಿ ಸಂವಿಧಾನ ಜಾಗೃತಿ ಮೂಡಿಸಿದ ಜಾಥಾ ಕಾರ್ಯಕ್ರಮ

*ಧಾರವಾಡ(ಕರ್ನಾಟಕ ವಾರ್ತೆ)ಫೆ.23* ಭಾರತ ಸಂವಿಧಾನ ಜಾರಿಗೆ ಬಂದು 75 ವರ್ಷಗಳು ಸಂದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಸಂವಿಧಾನದ ಮಹತ್ವವನ್ನು ಪ್ರತಿ ಸಾಮಾನ್ಯ ಪ್ರಜೆಗೂ ತಲುಪಿಸುವ ಹಿನ್ನೆಲೆಯಲ್ಲಿ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಸಂವಿಧಾನದ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಜಿಲ್ಲಾಡಳಿತದಿಂದ ಆಯೋಜಿಸಲು ಆದೇಶಿಸಿತ್ತು.

ಅದರಂತೆ ಧಾರವಾಡ ಜಿಲ್ಲೆಯಲ್ಲಿ ಜನವರಿ 26 ರಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್, ಅವರು ಧಾರವಾಡ ಜಿಲ್ಲಾ ಕ್ರೀಡಾಂಗಣದಲ್ಲಿ ಸಂವಿಧಾನ ಜಾಗೃತಿ ಜಾಥಾ ಸ್ಥಬ್ದ ಚಿತ್ರಕ್ಕೆ ಪುಗಣ್ಪರ್ಣೆ ಮಾಡುವ ಮೂಲಕ ಚಾಲನೆ ನೀಡಿದರು

ಜಿಲ್ಲೆಯಲ್ಲಿ ಇಂದು ಸಂವಿಧಾನ ಜಾಗೃತ ಜಾಥಾ ಕಾರ್ಯಕ್ರಮ ಹುಬ್ಬಳ್ಳಿಯಲ್ಲಿ ಮುಕ್ತಾಯಗೊಂಡಿದ್ದು, ಇದೇ ತಿಂಗಳ 24 ಮತ್ತು 25 ರಂದು ಜರಗುವ ರಾಜ್ಯ ಮಟ್ಟದ ಸಂವಿಧಾನ ಮತ್ತು ರಾಷ್ಟ್ರೀಯ ಐಕ್ಯತಾ ಸಮಾವೇಶಕ್ಕೆ ಸ್ಥಬ್ದ ಚಿತ್ರದ ವಾಹನ ತೆರಳಿ, ಭಾಗವಹಿಸಲಿದೆ. ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥಾ ಅತ್ಯಂತ ಯಶಸ್ವಿಯಾಗಿದ್ದು, ಜಾಥಾದ ವಿನೂತನ ಕಾರ್ಯಕ್ರಮಗಳಲ್ಲಿ ಎರಡು ಇವೆಂಟ್ಗಳು ಇಂಡಿಯಾ ಬುಕ್ ಆಫ್ ರೆಕಾರ್ಡಗೆ ಸೇ–ರಿದ್ದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ.

ಒಟ್ಟು 29 ದಿನಗಳ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಆಯೋಜನೆ ಮತ್ತು ಸಾರ್ವಜನಿಕರ ಪಾಲ್ಗೊಳ್ಳುವಿಕೆಯಲ್ಲಿ ರಾಜ್ಯದ 31 ಜಿಲ್ಲೆಗಳನ್ನು ಸರಕಾರದಿಂದ ಪರಿಗಣಿಸಲಾಗಿದ್ದು, ಅವುಗಳಲ್ಲಿ ಧಾರವಾಡ ಜಿಲ್ಲೆ ಒಟ್ಟು 22 ದಿನಗಳ ಕಾಲ ರಾಜ್ಯಕ್ಕೆ ಹಾಗೂ ಬೆಳಗಾವಿ ವಿಭಾಗಕ್ಕೆ ಸಂವಿಧಾನ ಜಾಗೃತಿ ಜಾಥಾ ಆಯೋಜನೆಯಲ್ಲಿ ಪ್ರಥ–'ಮ ಸ್ಥಾನ ಪಡೆದಿದೆ.




ಸಂವಿಧಾನ ಜಾಗೃತಿ ಜಾಥಾ: ಭಾರತದ ಸಂವಿಧಾನದ ಮಹತ್ವ, ಸಂವಿಧಾನವು ನೀಡಿರುವ ಹಕ್ಕು, ಸ್ವಾತಂತ್ರ್ಯಗಳು, ಅಧಿಕಾರಗಳು ಮತ್ತು ಸಂವಿಧಾನದಿಂದಲೇ ಭಾರತದ ಮತ್ತು ರಾಜ್ಯದ ಆರ್ಥಿಕ, ಸಾಮಾಜಿಕ, ರಾಜಕೀಯ, ಶೈಕ್ಷಣಿಕ ಮತ್ತು ಸರ್ವಾಂಗೀಣ ಅಭಿವೃದ್ಧಿ ಎಂಬ ಸಂದೇಶವನ್ನು ಎಲ್ಲರಿಗೂ ತಿಳಿಯಪಡಿಸುವ ಮತ್ತು ಅರಿವು ಮೂಡಿಸುವುದು ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಜನವರಿ 26, 2024 ರಿಂದ ಫೆಬ್ರವರಿ 24, 2024ರ ವರೆಗೆ ಜಿಲ್ಲೆಗಳಲ್ಲಿನ ಎಲ್ಲ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದಲ್ಲಿ "ಸಂವಿಧಾನ ಜಾಗೃತಿ ಜಾಥಾ" ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಧಾರವಾಡ ಜಿಲ್ಲೆಯ 146 ಗ್ರಾಮ ಪಂಚಾಯತಗಳು, 7 ಸ್ಥಳೀಯ ನಗರ ಸಂಸ್ಥೆಗಳು ಮತ್ತು ಮಹಾನಗರ ಪಾಲಿಕೆಯ ವ್ಯಾಪ್ತಿಯ ಎಲ್ಲಾ ವಾರ್ಡ್ಗಳು ಸೇರಿ ಒಟ್ಟು 1,528 ಕಿ.ಮೀ. ಗಳುದ್ದಕ್ಕೂ ಜಾಥಾ ಸಂಚ–ರಿಸಿದೆ. ಜಾಥಾ ಸಂಚರಿಸುವ ಸಂದರ್ಭದಲ್ಲಿ ಜಿಲ್ಲೆಯ ಸ್ಥಳೀಯ, ಐತಿಹಾಸಿಕ ವ್ಯಕ್ತಿಗಳು, ಸ್ಥಳೀಯ ಕಲೆ, ಇತ್ಯಾದಿಗಳನ್ನು ಒಳಗೊಂಡಿರುವ ವಿಷಯಗಳ ಬಗ್ಗೆ ಹಾಗೂ ಭಾರತ ಸಂವಿಧಾನದ "ಅನುಚ್ಛೇದ 41"ರ ರಾಜನಿರ್ದೇಶಕ ತತ್ವದ ಮಹತ್ವ ಕುರಿತು ಉಪನ್ಯಾಸ ಮತ್ತು ವಿವಿಧ ಕಲಾ ತಂಡಗಳಿಂದ ಕಲಾ ಪ್ರದರ್ಶನ ಸಹ ಹಮ್ಮಿಕೊಳ್ಳಲಾಗಿತ್ತು.

ಈ ಐತಿಹಾಸಿಕ ಮತ್ತು ಸ್ಫೂರ್ತಿದಾಯಕವಾದ ಕಾರ್ಯಕ್ರಮದ ಪ್ರಯುಕ್ತ ಫೆಬ್ರವರಿ 15, ರಂದು ರಾಜ್ಯದಲ್ಲಿ ಪ್ರಥಮ ಬಾರಿಗೆ ತೃತಿಯ ಲಿಂಗಿಗಳ ಜಾಥಾವನ್ನು ಹುಬ್ಬಳ್ಳಿಯ ನಗರದ ರಾಣಿ ಚೆನ್ನಮ್ಮ ವೃತ್ತದಿಂದ ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿವರೆಗೂ ತೃತಿಯ ಲಿಂಗಿಗಳ, ದೇವದಾಸಿ ಮಹಿಳೆಯರ, ಪರಿತ್ಯಕ್ತ ಮಹಿಳೆಯರ, ಅಂಗನವಾಡಿ ಕಾರ್ಯಕರ್ತರ, ಆಶಾ ಕಾರ್ಯಕರ್ತರ ಮತ್ತು ದಮನಿತ ಮಹಿಳೆಯರ ರ್ಯಾಲಿಯನ್ನು ಹಮ್ಮಿಕೊಳ್ಳಲಾಗಿತ್ತು.

ರಾಜ್ಯದಲ್ಲಿ ಮೊದಲ ಬಾರಿಗೆ ಫೆಬ್ರವರಿ 16, 2024ರಂದು ಧಾರವಾಡ ನಗರ ಕೆ.ಸಿ.ಡಿ. ವೃತ್ತದಿಂದ ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿಯವರೆಗೆ ಸುಮಾರು 500 ಕ್ಕೂ ಹೆಚ್ಚು ಜನ ಅಂಗವಿಕಲರು ಸಂವಿಧಾನ ಜಾಗೃತಿಗಾಗಿ, ತಮ್ಮ ತ್ರಿಚಕ್ರ ವಾಹನಗಳೊಂದಿಗೆ ರ್ಯಾಲಿಯನ್ನು ಏರ್ಪಡಿಸಿದ್ದರು.

"ಪಾರಂಪರಿಕ ನಡಿಗೆ" ಮತ್ತು "ಪಂಜಿನ ಮೆರವಣಿಗೆ" ಇಂಡಿಯಾ ಬುಕ್ ಆಫ್ ರೆಕಾರ್ಡ (Indian Book of Record) ಗೆ ಸೇರ್ಪಡೆ: ದೇಶದಲ್ಲಿ ಪ್ರಥಮ ಬಾರಿಗೆ ಫೆಬ್ರವರಿ 17, 2024ರಂದು ಧಾರವಾಡದಲ್ಲಿ ಕೆ.ಸಿ.ಡಿ. ವೃತ್ತದಿಂದ ಡಾ.ಬಿ.ಆರ್. ಅಂಬೇಡ್ಕರರ್ವರು ಸ್ಥಾಪಿಸಿರುವ ವಿದ್ಯಾರ್ಥಿ ನಿಲಯದವರೆಗೂ "ಪಾರಂಪರಿಕ ನಡಿಗೆ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಪಾರಂಪರಿಕ ನಡಿಗೆ ಕಾರ್ಯಕ್ರಮದಲ್ಲಿ 10,000ಕ್ಕೂ ಅಧಿಕ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು, ವಿವಿಧ ಸಂಘ–ಸಂಸ್ಥೆಗಳ ನಾಯಕರು, ಪದಾಧಿಕಾ–ರಿಗಳು, ಸಾರ್ವಜನಿಕರು, ಅಧಿಕಾರಿಗಳು ಭಾಗವಹಿಸಿದ್ದರು. ಈ "ಪಾರಂಪರಿಕ ನಡಿಗೆ" ಕಾರ್ಯಕ್ರಮವು "Indian Book of Record" ಗೆ ಸೇರ್ಪಡೆಯಾಗಿದೆ.

ಫೆ.19, 2024 ರಂದು ದೇಶದಲ್ಲಿ ಪ್ರಥ–'ಮ ಬಾರಿಗೆ 15,000 ಕ್ಕೂ ಹೆಚ್ಚು ಜನರಿಂದ "ಪಂಜಿನ ಮೆರವಣಿಗೆ"ಯನ್ನು ಹುಬ್ಬಳ್ಳಿಯ ಉಣಕಲ್ ಕ್ರಾಸ್ನಿಂದ ರಾಣಿ ಚೆನ್ನಮ್ಮ ವೃತ್ತದವರೆಗೂ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವು ಸಹ "Indian Book of Record" ಗೆ ಸೇರ್ಪಡೆಯಾಗಿದೆ.

ಫೆ.19, 2024 ಮರಳು (Sand Art) ದಲ್ಲಿ ಭಾರತದ ಸಂವಿಧಾನ ಮತ್ತು ಭಾರತ, ಸಂಸತ್ತನ್ನು ಬಿಡಿಸಿ ರಾಜ್ಯದಲ್ಲಿ 2ನೇ ಬಾರಿಗೆ ಮರಳು ಶಿಲ್ಪಕಲೆ ಮೂಲಕ ಸಂವಿಧಾನ ಜಾಥಾವನ್ನು ಮಾಡಿಸಲಾಯಿತು. ಮತ್ತು ಫೆ 23, 2024 ರಂದು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ವತಿಯಿಂದ ಗೋಡೆಗಳ ಮೇಲೆ "ಸಂವಿಧಾನ ಕು–ರಿತು" ಚಿತ್ರ ಬಿಡಿಸುವ ಸ್ಪರ್ಧೆಯನ್ನು ಹಮ್ಮಿಕೊಂಡು ಯಶಸ್ವಿಗೊಳಿಸಲಾಯಿತು.

ಸಂವಿಧಾನ ಘೋಷ ವಾಕ್ಯ (Constitution Quotation) ರಚನೆ ಎಂಬ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಉತ್ತಮ ಘೋಷವಾಕ್ಯಗಳನ್ನು ಸಲ್ಲಿಸಿದವ–ರಿಗೆ ಬಹುಮಾನ ವಿತರಿಸಲಾಗುತ್ತಿದೆ. ಸಂವಿಧಾನದ ಬಗ್ಗೆ ಒಂದು ನಿಮಿಷದ ಭಾಷಣ ("One minute on our Constitution") ಎಂಬ ಸ್ಪರ್ಧೆಯನ್ನು 18–30 ವರ್ಷ ಒಳಗಿರುವ ಯುವಕರಿಗೆ, ಕಾಲೇಜು ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದು, ಉತ್ತಮವಾದ ವಿಡಿಯೋವನ್ನು ಕಳುಹಿಸಿರುವ, ಉತ್ತಮ ಮಾಹಿತಿ ಮತ್ತು ವಿಷಯ ಮಂಡನೆ ಸಮರ್ಥವಾಗಿ ಮಾಡಿರುವವರಿಗೆ ಜಿಲ್ಲಾಡಳಿತ ವತಿಯಿಂದ ಪ್ರಥಮ, ದ್ವಿತೀಯ ಹಾಗೂ ತೃತಿಯ ಬಹುಮಾನವನ್ನು ನೀಡಲಾಗುತ್ತದೆ.

ಜಿಲ್ಲೆಯಲ್ಲಿ ಸುಮಾರು 2,30,000 ಸಂವಿಧಾನ ಪೀಠಿಕೆಯ ಪ್ರತಿಗಳನ್ನು ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗಿದೆ. 2 ಲಕ್ಷಕ್ಕೂ ಅಧಿಕ ಮಕ್ಕಳು (ಶಾಲಾ–ಕಾಲಾಜು),

ಕಳೆದ ಒಂದು ಬತಿಂಗಳಿಂದ ಜಿಲ್ಲೆಯಲ್ಲಿ ಆಯೋಜಿಸಿದ್ದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ವಿವಿಧ ಸಂಘ–ಸಂಸ್ಥೆಗಳ ನಾಯಕರು, ಪದಾಧಿಕಾ–ರಿಗಳು, ಸಾರ್ವಜನಿಕರು, ಅಧಿಕಾರಿಗಳು ಭಾಗವಹಿಸಿದ್ದಾರೆ. ಸಂವಿಧಾನ ಜಾಗೃತಿ ಜಾಥಾದ ಅರಿವು ಮೂಡಿಸುವ ಚಟುವಟಿ–ಕೆಗಳಲ್ಲಿ ರಾಜ್ಯಕ್ಕೆ ಹಾಗೂ ಬೆಳಗಾವಿ ವಿಭಾಗ ಮಟ್ಟದಲ್ಲಿ ಧಾರವಾಡ ಜಿಲ್ಲೆಯು ಪ್ರಥಮ ಸ್ಥಾನ ಪಡೆದಿದೆ.

# ರಾಜ್ಯಕ್ಕೆ ಅನುದಾನ ಹಂಚಿಕೆಯನ್ನು ಶೇ.30 ರಿಂದ 40ಕ್ಕೆ ಹೆಚ್ಚಿಸಲು ಯುಪಿಎ ಸರ್ಕಾರ ನಿರಾಕರಿಸಿತ್ತು: ಬಿಜೆಪಿ

ಬೆಂಗಳೂರು: ತೆರಿಗೆ ಮತ್ತು ಅನುದಾನ ಹಂಚಿಕೆ ವಿಚಾರದಲ್ಲಿ ರಾಜ್ಯ ಸರ್ಕಾರ ಕೇಂದ್ರದತ್ತ ಬೊಟ್ಟು ಮಾಡುವ ಯತ್ನವನ್ನು ಖಂಡಿಸಿ ರಾಜ್ಯ ಬಿಜೆಪಿ ಶುಕ್ರವಾರ ವಿಧಾನಸಭೆಯಲ್ಲಿ ನಿರ್ಣಯ ಮಂಡಿಸಿದೆ. ಈ ಸಂದರ್ಭದಲ್ಲಿ ಮಾತನಾಡಿದ ವಿಪಕ್ಷ ನಾಯಕ ಆರ್. ಅಶೋಕ್, ನಾವೆಲ್ಲರೂ ಕರ್ನಾಟಕದ ಅಭಿವೃದ್ಧಿಗೆ ನಮ್ಮ ಬದ್ಧತೆಯನ್ನು ತೋರಿಸಬೇಕು.

ಆದರೆ ಕೇಂದ್ರದತ್ತ ಬೊಟ್ಟು ಮಾಡುವುದು ರಾಜಕೀಯ ಪ್ರೇರಿತ ಮತ್ತು ತಪ್ಪು ಅಂಕಿ ಅಂಶಗಳನ್ನು ನಾವು ಬಲವಾಗಿ ಟೀಕಿಸಬೇಕು. ಆರ್ಥಿಕತೆಯ ಕುರಿತು ಸರ್ಕಾರ ಅಂಗೀಕರಿಸಿದ ನಿರ್ಣಯವನ್ನು ನಾವು ಬಲವಾಗಿ ಖಂಡಿಸುತ್ತೇವೆ. ಕಳಪೆ ತೆರಿಗೆ ಸಂಗ್ರಹದಿಂದ ಆರ್ಥಿಕ ಪ್ರಗತಿ ಸಾಧಿಸುವಲ್ಲಿ ತನ್ನ ವೈಫಲ್ಯವನ್ನು ಮುಚ್ಚಿಕೊಳ್ಳಲು ಕೇಂದ್ರವನ್ನು ದೂಷಿಸುವ ಧೋರಣೆಯನ್ನು ಸರ್ಕಾರ ನಿಲ್ಲಿಸಬೇಕು ಎಂದು ಹೇಳಿದರು.

"ಭಾರತವು ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ 75 ವರ್ಷಗಳು ಕಳೆದಿವೆ ಮತ್ತು ಈ ಸಮಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿತ್ತು. ಹಲವು ವರ್ಷಗಳಿಂದ ಕರ್ನಾಟಕದ ಅನುದಾನದ ಪಾಲ ಕೇವಲ ಶೇಕಡ 20 ರಷ್ಟಿತ್ತು ಮತ್ತು ಶೇಕಡ 30 ಕ್ಕೆ ಏರಿಸಲು ಸುದೀರ್ಘ ಹೋರಾಟವನ್ನು ಕೈಗೊಳ್ಳಬೇಕಾಗಿತ್ತು. ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ರಾಜ್ಯದ ಪಾಲನ್ನು ಶೇ.30ರಿಂದ ಶೇ.40ಕ್ಕೆ ಹೆಚ್ಚಿಸಲು ನಿರಾಕರಿಸಿತ್ತು ಎಂದು ನಿರ್ಣಯದಲ್ಲಿ ಹೇಳಲಾಗಿದೆ. ಯುಪಿಎ ಸರ್ಕಾರದ ವಿರುದ್ಧ ಆಕ್ಷೇಪ ಎತ್ತಲು ಕಾಂಗ್ರೆಸ್ ನಿರಾಕರಿಸಿದೆ.

ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ರಚನೆಯಾದ ಕೆಲವೇ ದಿನಗಳಲ್ಲಿ ಸಹಕಾರಿ



ಫೆಡರಲಿಸಂ ನೀತಿಯನ್ನು ಅಂಗೀಕರಿಸಲಾಯಿತು ಮತ್ತು ರಾಜ್ಯದ ಪಾಲನ್ನು ಶೇ. 32 ರಿಂದ ಶೇ.42ಕ್ಕೆ ಹೆಚ್ಚಿಸಲಾಯಿತು. "ಸಂವಿಧಾನದಂತೆ ಜಿಎಸ್‌ಟಿ ಕಾನೂನನ್ನು ರೂಪಿಸಲಾಗಿದೆ. ಐದು ವರ್ಷದ ರಾಜ್ಯದ ಶೇ. 14 ರ ಆರ್ಥಿಕ ಬೆಳವಣಿಗೆಯನ್ನು ಆಧರಿಸಿ ಜಿಎಸ್‌ಟಿ ಪರಿಹಾರವನ್ನು ನಿರ್ಧರಿಸಲಾಗಿದೆ. 14 ರಷ್ಟು ಆರ್ಥಿಕ ಬೆಳವಣಿಗೆಯ ಪ್ರಕಾರ, ಕರ್ನಾಟಕವು ಕೇಂದ್ರ ಸರ್ಕಾರದಿಂದ 1,06,258 ಕೋಟಿ ರೂಪಾಯಿಗಳನ್ನು ಪರಿಹಾರವಾಗಿ ಪಡೆದಿದೆ. ಇದು 2022 ರಲ್ಲಿ ಕೊನೆಗೊಂಡಿದ್ದರೂ, ರಾಜ್ಯ ಸರ್ಕಾರವು 2023-24 ನೇ ಸಾಲನ್ನು ಸೇರಿಸುವ ಮೂಲಕ ನಕಲಿ ಖಾತೆಯನ್ನು ನೀಡಲು ಪ್ರಯತ್ನಿಸುತ್ತಿದೆ ಎಂದು ನಿರ್ಣಯದಲ್ಲಿ ಉಲ್ಲೇಖಿಸಲಾಗಿದೆ.

ಕೇಂದ್ರ ಸರ್ಕಾರ ವಿವಿಧ ಕೇಂದ್ರ ಪ್ರಾಯೋಜಿತ ಯೋಜನೆಗಳ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಡಿಬಿಟಿ ವ್ಯವಸ್ಥೆಯನ್ನು ಅನುಸರಿಸುತ್ತಿದೆ. ಕಾಂಗ್ರೆಸ್ ಸರ್ಕಾರದ ಕಾಲದಿಂದಲೂ ಸೆಸ್ ಮತ್ತು ಸರ್ಚಾರ್ಜ್ ಅಸ್ತಿತ್ವದಲ್ಲಿದೆ ಮತ್ತು ಕೆಲವು ಕಾರ್ಯಕ್ರಮಗಳಿಗೆ ಮಾತ್ರ ತೆರಿಗೆ ವಿಧಿಸುವ ಅಧಿಕಾರ ಕೇಂದ್ರಕ್ಕೆ ಇದೆ. ಕರ್ನಾಟಕವು 1,06,258 ಕೋಟಿ ರೂ. ಗಳನ್ನು ಜಿಎಸ್‌ಟಿ ಪರಿಹಾರ, ಸೆಸ್ ಮತ್ತು ಸರ್‌ಚಾರ್ಜ್‌ನಂತೆ ಸ್ವೀಕರಿಸಿದೆ. ಶೇ. 14 ರಷ್ಟು ಆರ್ಥಿಕ ಬೆಳವಣಿಗೆಯನ್ನು ಸಾಧಿಸದಿದ್ದರೂ, ರಾಜ್ಯಗಳಿಗೆ 14 ರಷ್ಟು ಪರಿಹಾರವನ್ನು ನೀಡುವುದು ಬೆಳವಣಿಗೆಯಲ್ಲಿ ಸ್ಥಿರತೆಯನ್ನು ತರಲು ಸಹಾಯ ಮಾಡಿದೆ ಎಂದು ಅದು ಹೇಳಿದೆ.

ಗುರುವಾರ ನಿರ್ಣಯ ಮಂಡಿಸಿ ಮಾತನಾಡಿದ ಕಾನೂನು ಸಚಿವ ಎಚ್. ಕೆ. ಪಾಟೀಲ್, ಕಳೆದ ದಶಕದಿಂದ ಕೇಂದ್ರದಿಂದ ಹಣ ಹಂಚಿಕೆಯಲ್ಲಿ ಹಲವು ಪಕ್ಷಪಾತದ ನಿದರ್ಶನಗಳನ್ನು ಕರ್ನಾಟಕದ ಜನತೆ ಗಮನಿಸಿದ್ದಾರೆ. ಸರ್ಕಾರ, ಹಣಕಾಸು ಆಯೋಗಗಳು ಶಿಫಾರಸು ಮಾಡಿದ ಅನುದಾನವನ್ನು ಒದಗಿಸುವಲ್ಲಿ, ಬರ ಪರಿಹಾರ ಮಾನದಂಡಗಳ ಪ್ರಕಾರ ಕೇಂದ್ರ ಪಾಲನ್ನು ಮಂಜೂರು ಮಾಡುವುದರಲ್ಲಿ ತಾರತಮ್ಯ ಧೋರಣೆ ಅನುಸರಿಸುತ್ತಿದೆ ಎಂದು ಆರೋಪಿಸಿದರು.

"ಅಭಿವೃದ್ಧಿ ಹೊಂದದ ಮತ್ತು ಬಡ ರಾಜ್ಯಗಳಿಗೆ ಹೆಚ್ಚಿನ ಅನುದಾನ ಸಿಗುತ್ತದೆ ಎಂಬ ಕಲ್ಪನೆಯ ಜೊತೆಗೆ, ಕೇಂದ್ರ ಸರ್ಕಾರವು ಒಕ್ಕೂಟ ವ್ಯವಸ್ಥೆಯ ತತ್ವಗಳನ್ನು ಅನುಸರಿಸದೆ ಮತ್ತು ಉತ್ತಮ ಪ್ರಗತಿ ಸಾಧಿಸಿದ ರಾಜ್ಯಗಳಿಗೆ ನ್ಯಾಯ ಒದಗಿಸುವ ಮೂಲಕ ಕರ್ನಾಟಕದಂತಹ ಪ್ರಗತಿಪರ ರಾಜ್ಯಗಳ ಬೇರುಗಳನ್ನು ಹೊಡೆಯುತ್ತಿದೆ ಎಂದು ಕಾಂಗ್ರೆಸ್ ನಿರ್ಣಯದಲ್ಲಿ ಹೇಳಲಾಗಿತ್ತು.

ನಾಗರಿಕರ ಹಿತದೃಷ್ಟಿಯಿಂದ ಆರ್ಥಿಕ ಸಂಪನ್ಮೂಲಗಳ ಸಮಾನ ಹಂಚಿಕೆ ಮತ್ತು ತಾರತಮ್ಯರಹಿತ ಹಂಚಿಕೆಯ ಬಲವಾದ ನಿಲುವನ್ನು ತೆಗೆದುಕೊಳ್ಳುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲು ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ ಮತ್ತು ಕರ್ನಾಟಕದ ಜನರ ಹಿತದೃಷ್ಟಿಯಿಂದ ಯಾವುದೇ ಅನ್ಯಾಯವನ್ನು ಮಾಡಬಾರದು ಎಂದು ಅದು ಹೇಳಿದೆ.

# ಭೀಮವಾದ ಡಿಎಸ್‌ಎಸ್ ವಿವಿಧ ಘಟಕಗಳ ಪದಾಧಿಕಾರಿಗಳ ಆಯ್ಕೆ

ಹುಕ್ಕೇರಿ: ತುಳಿತಕ್ಕೆ ಒಳಗಾದ ಸಮುದಾಯಗಳನ್ನು ಸಂಘಟಿಸಿ ಅವರಲ್ಲಿ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಪ್ರಜ್ಞೆ ಮೂಡಿಸುವ ಹೊಣೆಗಾರಿಕೆ ಪ್ರತಿಯೊಬ್ಬ ದಲಿತ ಯುವಕರ ಮೇಲಿದೆ ಎಂದು ಭೀಮವಾದ ದಲಿತ ಸಂಘರ್ಷ ಸಮಿತಿ ರಾಜ್ಯ ಸಮಿತಿ ಸದಸ್ಯ ಕೆಂಪಣ್ಣಾ ಶಿರಹಟ್ಟಿ ಅಭಿಪ್ರಾಯಪಟ್ಟರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ನಡೆದ ಭೀಮವಾದ ದಲಿತ ಸಂಘರ್ಷ ಸಮಿತಿ ತಾಲೂಕು ಘಟಕ ಪುನರಚನೆ ಹಾಗೂ ರಾಜ್ಯ ಸಮಿತಿ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಸಮಾಜದ ಕಟ್ಟಕಡೆಯ ವ್ಯಕ್ತಿಗಳನ್ನೂ ತಲುಪುವ ನಿಟ್ಟಿನಲ್ಲಿ ಈ ನೂತನ ಡಿಎಸ್‌ಎಸ್ ಸಂಘಟನೆ ಹೊಸ ಹೊಸ ಯೋಜನೆಗಳನ್ನು ಹಾಕಿಕೊಂಡಿದೆ ಎಂದರು.



ರಾಜ್ಯ ಸಂಚಾಲಕ ಸಂಜೀವ ಕಾಂಬಳೆ ಮಾತನಾಡಿ, ಹೊಸದಾಗಿ ಆರಂಭವಾದ ಈ ಸಂಘಟನೆಯನ್ನು ಜಿಲ್ಲೆ ಸೇರಿದಂತೆ ರಾಜ್ಯದ ಉದ್ದಗಲಕ್ಕೂ ವಿಸ್ತರಿಸುವ ದಿಸೆಯಲ್ಲಿ ಕಾರ್ಯಕರ್ತರಿಗೆ ಸಭೆ, ಕರ್ಯಾಗಾರ, ಅರಿವು ಮೂಡಿಸುವ ಜಾಥಾ ನಡೆಸಲು ಉದ್ದೇಶಿಸಲಾಗಿದೆ. ಈ ಮೂಲಕ ಸಂಘಟನೆ ಬಲಪಡಿಸಿ ದಲಿತರಿಗೆ ಆಗುತ್ತಿರುವ ಅನ್ಯಾಯ ತಡೆಗಟ್ಟಲಾಗುವುದು. ಸಂವಿಧಾನ ರಕ್ಷಣೆಗೆ ಸಂಘಟನೆ ಸದಾ ಕಟಿಬದ್ಧವಾಗಿದೆ ಎಂದರು.

ಮುಖಂಡರಾದ ಪ್ರಕಾಶ ಮೈಲಾಖೆ, ಕಾಡಪ್ಪಾ ಮರಿನಾಯಿಕ, ಮಲ್ಲು ಕುರಣಿ, ಪ್ರದೀಪ ರಿಜಕನವರ, ಶಿವು ಮಾಳಗೆ, ರವಿ ಸನದಿ, ಪರಶುರಾಮ ಟೋಣಪೆ, ಶಿವಾನಂದ ಸಮಕ್ಕನವರ, ಕುಮಾರ ಕಾಂಬಳೆ, ರಾಜು ಬಂಗಾರಿ, ಪಾರೇಶ ಗೋಂದಳಿ, ನಿರ್ವಾಣಿ ಸನದಿ, ದೇವರಾಜ ಪಾರ್ಥನಳ್ಳಿ, ಕೃಷ್ಣಾ ಗಸ್ತಿ, ಪರಶುರಾಮ ಕೋಳಿ, ಸಂಗಮೇಶ ಕಾಂಬಳೆ, ನಿಖಿಲ ರ್ಯಾಗೋಳ, ಗಣೇಶ ಕೆಳಗಡೆ, ರೇಖಾ ಬಂಗಾರಿ, ಶಾಂತಾ ಹೆಳವಿ ಮತ್ತಿತರರು ಉಪಸ್ಥಿತರಿದ್ದರು.

ಇದೇ ವೇಳೆ ಜಿಲ್ಲಾ ಸಮಿತಿ ಸದಸ್ಯರನ್ನಾಗಿ ಕೆ.ವೆಂಕಟೇಶ, ಹೂಲಿ, ಶಂಕರ ಖಾತೇದಾರ, ಸುಖದೇವ ತಳವಾರ, ತಾಲೂಕು ಸಂಚಾಲಕರನ್ನಾಗಿ ಮಂಜುನಾಥ ಪಡದಾರ, ಸಂಘಟನಾ ಸಂಚಾಲಕರಾಗಿ ರಾಜು ಮೂಥಾ, ಕಿರಣ ಬಾಗೇವಾಡಿ, ಶಿವು ದೊಡಮನಿ, ಮಾರುತಿ ಶಿರಹಟ್ಟಿ, ಮಹಾದೇವ ಪರಕಿ, ಸದಾನಂದ ಎಂ.ಎಚ್., ಬಸವರಾಜ ಕಾಂಬಳೆ, ಸಿದ್ದಣ್ಣ ಹೊಸಟ್ಟಿ, ಬಸವರಾಜ ಗುಡ್ಯಾಗೋಳ ಪರಶುರಾಮ ತುರಾಯಿ, ಬಾಳಪ್ಪಾ ನೇರ್ಲೇಕರ, ಮಹಿಳಾ ಘಟಕಕ್ಕೆ ನಾಗವೇಣಿ ಬಾಗಿ, ಸರಸ್ವತಿ ಹಂದಿಗೂಡ, ಆರತಿ ಕಾಂಬಳೆ, ಮಹಾದೇವಿ ಪಾಟೀಲ, ರೇಣುಕಾ ಬಾರಾಟಕ್ಕೆ, ಕಸ್ತೂರಿ ತಿಪ್ಪಾಗೋಳ, ಮದೀನಾ ನೇಸರಗಿ, ಕಮಲಾ ಗುಡೆ, ಬಾಳವ್ವಾ ಯರಗಟ್ಟಿ, ವಿದ್ಯಾರ್ಥಿ ಘಟಕಕ್ಕೆ ಮಹೇಶ ಮಾಳಗೆ ಅವರನ್ನು ಆಯ್ಕೆ ಮಾಡಲಾಯಿತು.

# 25 ಲಕ್ಷ ರೂ.ವೆಚ್ಚದ ನೂತನ ಕಾಮಗಾರಿಗೆ ಚಾಲನೆ



ಯಮಕನಮರಡಿ: ಯಮಕನಮರಡಿ ವಿಧಾನಸಭಾ ಕ್ಷೇತ್ರದ ಕುರಣಿ ಗ್ರಾಮದಿಂದ ಹಿರಣ್ಯಕೇಶಿ ನದಿಯವರೆಗೂ (ಬಸವನಗರ) ಸುಮಾರು 25 ಲಕ್ಷ ರೂ.ವೆಚ್ಚದ ನೂತನ ರಸ್ತೆ ನಿರ್ಮಾಣ ಕಾಮಗಾರಿಗೆ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಚಾಲನೆ ನೀಡಿದರು.

ಕುರಣಿ ಗ್ರಾಮಕ್ಕೆ ಭೇಟಿ ನೀಡಿ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿದರು, ಬಳಿಕ ದೇವಸ್ಥಾನಕ್ಕೆ ಭೇಟಿ ನೀಡಿ ಸಿಸಿ ಕಾಮಗಾರಿಯನ್ನು ವೀಕ್ಷಿಸಿದರು. ಈ ವೇಳೆ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರನ್ನು ಗ್ರಾಮಸ್ಥರು ಅದ್ದೂರಿಯಾಗಿ ಸ್ವಾಗತ ಮಾಡಿಕೊಂಡು, ಗೌರವ ಸಲ್ಲಿಸಿದರು.

ಈ ವೇಳೆ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಮಾತನಾಡಿ, ಯಮಕನಮರಡಿ ಮತಕ್ಷೇತ್ರದಲ್ಲಿ ಈಗಾಗಲೇ ಸಾಕಷ್ಟು ಅಭಿವೃದ್ಧಿ ಕಾರ್ಯಗಳಾಗಿವೆ. ತಂದೆಯವರ ಮಾರ್ಗದರ್ಶನದಲ್ಲಿ ಮುಂದಿನ ದಿನಗಳಲ್ಲಿ ಇನ್ನು ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದರ ಮೂಲಕ ಕ್ಷೇತ್ರವನ್ನು ರಾಜ್ಯದಲ್ಲಿ ಮಾದರಿ ಕ್ಷೇತ್ರವನ್ನಾಗಿ ರೂಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.


ಈ ಭಾಗದ ರೈತರಿಗೆ ಬೆಳೆಗಳನ್ನು ಸಾಗಿಸಲು ಸುಸಜ್ಜಿತವಾದ ರಸ್ತೆ ಇರಲಿಲ್ಲ, ಹೀಗಾಗಿ ಈ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಮಳೆಗಾಲ ಸಂದರ್ಭದಲ್ಲಿ ರೈತರ ಜಾನುವಾರುಗಳಿಗೆ ಜಮೀನಿಗೆ ತೆರಳು ಈ ರಸ್ತೆ ಬಹಳಷ್ಟು ಅನೂಕುಲವಾಗಿದೆ. ತಂದೆಯವರಾದ ಸಚಿವ ಸತೀಶ ಜಾರಕಿಹೊಳಿ ಅವರ ಸೂಚನೆ ಮೇರೆಗೆ ಶಾಸಕರ ವಿಶೇಷ ಅನುದಾನದಲ್ಲಿ ಕುರಣಿಯಲ್ಲಿ ಅಭಿವೃದ್ಧಿ ಕಾಮಗಾರಿ ಪ್ರಾರಂಭಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಪಂ ಸದಸ್ಯ ಮಹಾತೇಂಶ ಮಗದುಮ್ಮ, ಗ್ರಾಪಂ ಅಧ್ಯಕ್ಷೇ ಅವಕ್ಕ ಕೂದನೂರಿ, ಉಪಾಧ್ಯಕ್ಷರು ಸತೀಶ ಗಿಡಗಾರ,ಪ್ರಕಾಶ ಬಸ್ಸಾಪೂರೆ, ಆನಂದ ತವಗಮಠ, ಸಿದ್ಧಯ್ಯ ಹುಕ್ಕೇರಿ, ಲಕ್ಷ್ಮೀಕಾಂತ ಬಿಜವಾಣಿ, ಸುಭಾಷಚಂದ್ರ, ಮುಲ್ಲಾ ಹಾಗೂ ಇತರರು ಇದ್ದರು.

# ಬೆಳಗಾವಿ: ಪ್ರೇಯಸಿಯ ಖಾಸಗಿ ಪೋಟೋ ಗಂಡನಿಗೆ ಕೊಟ್ಟ ಪಾಗಲ್ ಪ್ರೇಮಿ

ಬೆಳಗಾವಿ: ಪ್ರೇಯಸಿಯ ಖಾಸಗಿ ಫೋಟೋ ಗಂಡನಿಗೆ ಕೊಟ್ಟು ವಿಕೃತಿ ಮೆರೆದಿರುವ ಘಟನೆ ಜಿಲ್ಲೆಯ ಕಿತ್ತೂರು ಪಟ್ಟಣದಲ್ಲಿ ಬಳಕಿಗೆ ಬಂದಿದೆ.

ಆರೋಪಿ ಮುತ್ತುರಾಜ್ ಎಂಬುವನೆ ನವ ವಿವಾಹಿತೆ ಬಾಳಲ್ಲಿ ವಿಲನ್ ಆಗಿದ್ದಾನೆ. ಬೇರೆ ಯುವಕನೊಂದಿಗೆ ಮದುವೆಯಾದ ಮರುದಿನವೇ ಯುವತಿ ಬಾಳಲ್ಲಿ ಪ್ರೇಮಿ ಮುತ್ತುರಾಜ್ ಹೈಡ್ರಾಮಾ ಮಾಡಿದ್ದಾನೆ. ಯುವತಿ ಜೊತೆಗೆ ಇದ್ದ ಖಾಸಗಿ ಫೋಟೋ, ವಿಡಿಯೋ ತೋರಿಸಿ ವಿಕೃತಿ ಮೆರೆದಿದ್ದಾನೆ.



ಫೋಟೋ, ವಿಡಿಯೋ ನೋಡಿ ಇಡೀ ಕುಟುಂಬ ಶಾಕ್ ಆಗಿದ್ದು, ನವ ವಿವಾಹಿತೆಯನ್ನು ಮನೆಯಿಂದ ಹೊರ ಹಾಕಿದ್ದಾರೆ. ಇತ್ತ ಪ್ರೇಮಿ ಮನೆ ಎದುರು ನವವಿವಾಹಿತೆ, ಧರಣಿ ಕೂತಿದ್ದಾಳೆ. ಪ್ರೇಮಿಯನ್ನು ವಶಕ್ಕೆ ಪಡೆಯಲಾಗಿದೆ. ಸಂತ್ರಸ್ತ ಯುವತಿ ಹಾಗೂ ಆರೋಪಿ ಮುತ್ತುರಾಜ್ ಕಳೆದ 6 ವರ್ಷಗಳಿಂದ ಪ್ರೀತಿ ಮಾಡುತ್ತಿದ್ದರಂತೆ. ಆದರೆ ಪ್ರಿಯಕರ ಆಕೆಯನ್ನು ಮದುವೆಯಾಗಲು ನಿರಾಕಸಿದ್ದ, ಈ ವೇಳೆ ಕುಟುಂಬಸ್ಥರು ಆಕೆಗೆ ಬೇರೆ ಯುವಕನ ಜೊತೆ ಮದುವೆ ಮಾಡಿಕೊಟ್ಟಿದ್ದಾರೆ.

ಯುವತಿ ಮದುವೆಯಾಗುತ್ತಿದ್ದಂತೆ ರೊಚ್ಚಿಗೆದ್ದ ಆರೋಪಿ ಮುತ್ತುರಾಜ್, ಮದುವೆಯಾದ ದಿನವೇ ಯುವತಿಯ ಪತಿ ಮನೆಗೆ ತೆರಳಿದ್ದನಂತೆ. ಅಲ್ಲದೇ ಯುವತಿ ತನ್ನೊಂದಿಗೆ ಕಳೆದ ಖಾಸಗಿ ಕ್ಷಣಗಳ ಫೋಟೋ ಹಾಗೂ ವಿಡಿಯೋಗಳನ್ನು ಆಕೆಯ ಗಂಡನಿಗೆ ತೋರಿಸಿದ್ದಾನೆ. ಇದರಿಂದ ನೊಂದ ಗಂಡನ ಕುಟುಂಬಸ್ಥರು, ನವ ವಿವಾಹಿತೆಯನ್ನು ಮನೆಯಿಂದ ಹೊರ ಹಾಕಿದ್ದಾರೆ. ಮದುವೆಯಾದ ಗಂಡನ ಮನೆ ಇತ್ತ ತವರು ಮನೆಯೂ ಇಲ್ಲದೆ ಸದ್ಯ ಯುವತಿ ಬೀದಿಗೆ ಬಿದ್ದಿದ್ದಾಳೆ. ಇತ್ತ ಆರೋಪಿ ಮುತ್ತುರಾಜ್ ಕುಟುಂಬಸ್ಥರು ಆಕೆಯನ್ನು ಮಗನಿಗೆ ಮದುವೆ ಮಾಡಿಕೊಳ್ಳಲು ನಿರಾಕರಿಸುತ್ತಿದ್ದಾರಂತೆ. ದಿಕ್ಕುತೋಚದಂತಾದ ಯುವತಿ ನ್ಯಾಯಕ್ಕಾಗಿ ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾಳೆ. ಪೊಲೀಸರಿಗೆ ದೂರು ನೀಡಿ ಆರೋಪಿ ಮನೆಯ ಎದುರು ಧರಣಿ ಕುಳಿತಿದ್ದಾಳೆ.

# ವಿದ್ಯಾರ್ಥಿವೇತನಕ್ಕಾಗಿ ಪೇಷಕರ ಆದಾಯ ಪ್ರಮಾಣಪತ್ರ ಸಲ್ಲಿಸಲು ಫೆ.29 ರವರೆಗೆ ಅವಕಾಶ

ಬಳ್ಳಾರಿ: 2023-24 ನೇ ಸಾಲಿನಲ್ಲಿ ಮುಖ್ಯಮಂತ್ರಿ ರೈತವಿದ್ಯಾನಿಧಿ ಕಾರ್ಯಕ್ರಮ ಹಾಗೂ ಭೂರಹಿತ ಕೃಷಿ ಕಾರ್ಮಿಕರ ವಿದ್ಯಾನಿಧಿ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳ ಪೇಷಕರ ಆದಾಯವು ರೂ.2.5 ಲಕ್ಷ ಮೀರಿರಬಾರದು ಎಂಬ ಷರತ್ತನ್ನು ವಿಧಿಸಿರುವುದರಿಂದ ಸಾಮಾನ್ಯ ವರ್ಗದಡಿ ಬರುವ ರೈತರ ಮಕ್ಕಳು ತಮ್ಮ ಪೇಷಕರ ಆದಾಯ ಪ್ರಮಾಣ ಪತ್ರವನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ವಿದ್ಯಾರ್ಥಿಗಳ ಲಾಗಿನ್ನಲ್ಲಿ ಸಲ್ಲಿಸಲು ಫೆ.29 ರ ವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಕೆ.ಮಲ್ಲಿಕಾರ್ಜುನ ಅವರು ತಿಳಿಸಿದ್ದಾರೆ.

## 121ನೇ ತುರ್ತು ನೀರಾವರಿ ಸಲಹಾ ಸಮಿತಿ ಸಭೆ

# ನಿಂತ ಬೆಳೆಗಳಿಗೆ, ಕುಡಿಯುವ ನೀರು ಕಾಯ್ದಿರಿಸಲು ಕಾಲುವೆಗೆ ನೀರು: ಸಚಿವ ಶಿವರಾಜ್ ತಂಗಡಗಿ

ಬಳ್ಳಾರಿ: ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರು ಆಗಿರುವ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ತುಂಗಭದ್ರಾ ಯೋಜನೆಯ 121ನೇ ತುರ್ತು ನೀರಾವರಿ ಸಲಹಾ ಸಮಿತಿ ಸಭೆ ನಡೆಯಿತು. ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಶುಕ್ರವಾರ (ಫೆ.23ರಂದು) ನಡೆದ ಸಭೆಯಲ್ಲಿ, ತುಂಗಭದ್ರಾ ಯೋಜನೆಯ ವಿಜಯನಗರ ಕಾಲುವೆಗಳಿಗೆ ನಿಂತ ಬೆಳೆಗಳನ್ನು ಸಂರಕ್ಷಿಸಲು ಹಾಗೂ ಬೇಸಿಗೆ ಕಾಲದಲ್ಲಿ ಕುಡಿಯುವ ನೀರನ್ನು ಕಾಯ್ದಿರಿಸುವ ಕುರಿತಂತೆ ಸಭೆಯಲ್ಲಿದ್ದ ಸಚಿವರು, ಶಾಸಕರು, ಸಂಸದರು ಹಾಗೂ ಸದಸ್ಯರು ಮತ್ತು ನೀರಾವರಿ ಅಧಿಕಾರಿಗಳು,



ಜಿಲ್ಲಾಧಿಕಾರಿಗಳು ಹಾಗೂ ಕೃಷಿ ಅಧಿಕಾರಿಗಳೊಂದಿಗೆ ವಿಸ್ತೃತವಾಗಿ ಚರ್ಚಿಸಿ ನೀರನ್ನು ಒದಗಿಸುವ ಕಾಲಾವಧಿಯ ಬಗ್ಗೆ ನಿರ್ಣಯಿಸಲಾಯಿತು.

**ಸಭೆಯ ನಿರ್ಣಯ:**

ತುಂಗಭದ್ರಾ ಎಡದಂಡೆ ಮುಖ್ಯಕಾಲುವೆ ಮೂಲಕ ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳಿಗೆ ಗಣೇಕಲ್ ಜಲಾಶಯ ಹಾಗೂ ಇತರೆ ಕೆರೆ ಕಟ್ಟೆಗಳಿಗೆ ಮಾ.5ರಿಂದ ಮಾ.16ರವರೆಗೆ 1200 ಕ್ಯೂಸೆಕ್ ನಂತೆ ಕುಡಿಯುವ ಹರಿಸಲಾಗುತ್ತದೆ. ತುಂಗಭದ್ರಾ ಬಲದಂಡೆ ಕೆಳಮಟ್ಟದ ಕಾಲುವೆ ಮೂಲಕ ಬಳ್ಳಾರಿ ಜಿಲ್ಲೆಗೆ ಹಾಗೂ ಇತರೆ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳಿಗೆ ಮಾ.10ರಿಂದ ಮಾ.20ರವರೆಗೆ 100 ಕ್ಯೂಸೆಕ್ಸ್ ನಂತೆ ಮತ್ತು ಅಗತ್ಯಕ್ಕೆ ಅನುಗುಣವಾಗಿ ಮಾ.21ರಿಂದ ಮಾ.31ರವರೆಗೆ 100 ಕ್ಯೂಸೆಕ್ ನಂತೆ ಕುಡಿಯುವ ನೀರಿನ ಯೋಜನೆಗೆ ಹಾಗೂ ಕೆರೆ ಕಟ್ಟೆಗಳನ್ನು ತುಂಬಿಸಲಾಗುವುದು. ರಾಯ ಬಸವಣ್ಣ ಕಾಲುವೆಯಿಂದ ವಿಜಯನಗರ ಜಿಲ್ಲೆಗೆ ಹಂಚಿಕೆಯಾದ 0.260 ಟಿಎಂಸಿ ನೀರಿನಲ್ಲಿ ಮಾ.1ರಿಂದ ಮೇ 30ರವರೆಗೆ 100 ಕ್ಯೂಸೆಕ್ಸ್ ನಂತೆ ಆನ್ ಆಫ್ ನಂತೆ ಕುಡಿಯುವ ನೀರೋಳಗೊಂಡು ಹರಿಸಬಹುದಾಗಿದೆ ಎಂದು ಸಭೆಯಲ್ಲಿ ನಿರ್ಣಯಿಸಲಾಯಿತು.

**ಜಿಲ್ಲಾಧಿಕಾರಿಗಳಿಗೆ ಸೂಚನೆ:**

ಈ ಸಮಯದಲ್ಲಿ ಸಂಬಂಧಿಸಿದ ಜಿಲ್ಲಾಧಿಕಾರಿಗಳು ಕಲಂ 144ನ್ನು ಅಳವಡಿಸಿ ಸೂಕ್ತ ಪೊಲೀಸ್ ಬಂದೋಬಸ್ತನ್ನು ಪಡೆದು ಕುಡಿಯುವ ನೀರಿನ ಕೆರೆ ಕಟ್ಟೆಗಳನ್ನು ತುಂಬಿಸಿಕೊಳ್ಳಲು ಸಭೆಯಲ್ಲಿ ತಿಳಿಸಲಾಯಿತು.

**ಕುಡಿಯುವ ನೀರಿಗೆ ಆದ್ಯತೆ:**

ಬೇಸಿಗೆಯಲ್ಲಿ ಕುಡಿಯುವ ನೀರಿಗೆ ಯಾವುದೇ ಸಮಸ್ಯೆಯಾಗದಂತೆ ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಿಗೆ ನೀರು ಹರಿಸಲು ತೀರ್ಮಾನ ಕೈಗೊಳ್ಳಲಾಗಿದೆ. ಜಲಾಶಯದಲ್ಲಿನ ನೀರಿನ ಲಭ್ಯತೆ ಆಧರಿಸಿ ನಾಲ್ಕು ಜಿಲ್ಲೆಗಳಿಗೆ ಕುಡಿಯುವ ನೀರು ಹಂಚಿಕೆ ಮಾಡಲಾಗಿದೆ. ಕುಡಿಯುವ ನೀರಿಗೆ ಮಾತ್ರ ಆದ್ಯತೆ ಕೊಟ್ಟು ಜನರಿಗೆ ನೀರು ಒದಗಿಸಲು ತೀರ್ಮಾನ ಮಾಡಲಾಗಿದೆ ಎಂದು ಸಚಿವರು ಸಭೆಯ ಬಳಿಕ ಸುದ್ದಿಗಾರರಿಗೆ ತಿಳಿಸಿದರು. ಸಭೆಯಲ್ಲಿ ಸಚಿವರಾದ ಡಾ.ಶರಣ್‌ಪ್ರಕಾಶ್ ಪಾಟೀಲ್, ಬಿ.ನಾಗೇಂದ್ರ, ನಾರಾ ಭರತ್ ರೆಡ್ಡಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಬೆಳಗಾವಿ: ಕಾರುಗಳು ಮುಖಾಮುಖಿ ಡಿಕ್ಕಿ; 3 ಜನ ಸ್ಥಳದಲ್ಲೇ ಸಾವು



ಬೆಳಗಾವಿ: ಸ್ವಿಫ್ಟ್ ಮತ್ತು ಅಲ್ಟೋ ಕಾರು ಮುಖಾಮುಖಿ ಡಿಕ್ಕಿಯಾಗಿರೋ ಭಯಾನಕ ಘಟನೆ ಯರಗಟ್ಟಿ ತಾಲೂಕಿನ ಕುರಬಗಟ್ಟಿ ಕ್ರಾಸ್ ಬಳಿ ನಡೆದಿದೆ. ಭೀಕರ ಅಪಘಾತದಲ್ಲಿ ಓರ್ವ ಮಹಿಳೆ, ಮಗು ಸೇರಿ ಮೂವರು ಸಾವನ್ನಪ್ಪಿದ್ದಾರೆ.

ಈ ಅಪಘಾತದಲ್ಲಿ ಮೂಡಲಗಿ ತಾಲೂಕಿನ ಪಟಗುಂದಿ ಗ್ರಾಮದ ಮುತ್ತು ನಾಯಕ್(8), ಗೋಪಾಲ್ ನಾಯಕ್(45) ಹಾಗೂ ಧಾರವಾಡ ಮೂಲಕ ಅನ್ನಪೂರ್ಣ(53) ಎಂಬುವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಈ ಅಪಘಾತದಲ್ಲಿ ಕಾರಿನಲ್ಲಿದ್ದಂತ ಮತ್ತಿಬ್ಬರು ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದಂತ ಮುರಗೋಡು ಠಾಣೆಯ ಪೊಲೀಸರು, ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಪೋಲಿಯೋ ಲಸಿಕಾ ಅಭಿಯಾನದಲ್ಲಿ ಮಕ್ಕಳು ಹೊರಗುಳಿಯದಿರಲಿ: ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ

ಬಳ್ಳಾರಿ: ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಮಾ.03 ರಂದು ಆಯೋಜಿಸಲಾಗಿದ್ದು, ಯಾವುದೇ ಅರ್ಹ ಮಕ್ಕಳು ಲಸಿಕೆಯಿಂದ ವಂಚಿತರಾಗಬಾರದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದಲ್ಲಿ ವಿವಿಧ ಇಲಾಖೆಗಳ ಪಾತ್ರ ಮುಖ್ಯವಾಗಿದ್ದು, ಎಲ್ಲ ಇಲಾಖೆಗಳ ಸಹಕಾರ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ತಮ್ಮ ತಮ್ಮ ಕರ್ತವ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಹಾಗೂ ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮ ಯಶಸ್ಸಿಗೆ ಕ್ರಮವಹಿಸಬೇಕು ಎಂದು ತಿಳಿಸಿದರು.

ಕಳೆದ 2022ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಿದ್ದು, ಈ ಬಾರಿಯೂ ಶೇ.100 ಪ್ರಗತಿ ಸಾಧಿಸಬೇಕು ಎಂದು ತಿಳಿಸಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಅಗತ್ಯವಿದ್ದಷ್ಟು ವಾಹನಗಳನ್ನು ಒದಗಿಸಬೇಕು ಎಂದು ಸಾರಿಗೆ ಅಧಿಕಾರಿಗಳಿಗೆ ಹೇಳಿದರು.

ಪಲ್ಸ್ ಪೋಲಿಯೋ ಲಸಿಕೆಯನ್ನು ಸುರಕ್ಷಿತವಾಗಿಡಲು ಹಾಗೂ ಶೀತಲ ಪ್ಯಾಕ್ಗಳನ್ನು ತಯಾರಿಸಲು ನಿರಂತರ ವಿದ್ಯುಚ್ಛಕ್ತಿಯು ಅವಶ್ಯಕತೆಯಿದ್ದು, ಮಾ.01 ರಿಂದ 06 ರ ವರೆಗೆ ನಗರ, ಗ್ರಾಮೀಣ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ವಿದ್ಯುಚ್ಛಕ್ತಿಯನ್ನು ನಿರಂತರವಾಗಿ ಸರಬರಾಜು ಮಾಡಲು ಕ್ರಮವಹಿಸಬೇಕು ಎಂದು ಕೆಪಿಟಿಸಿಎಲ್ ಅಧಿಕಾರಿಗಳಿಗೆ ತಿಳಿಸಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು



ಜಾಥಾ ಏರ್ಪಡಿಸಿ ಜಾಗೃತಿ ಮೂಡಿಸಬೇಕು. ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ 5 ವರ್ಷದೊಳಗಿನ ಮಕ್ಕಳಿದ್ದಲ್ಲಿ ಲಸಿಕೆ ಹಾಕಲು ಪೋಷಕರಿಗೆ ಪ್ರೇರೇಪಿಸಬೇಕು. ಈ ಕುರಿತು ಡಿಡಿಪಿಐ ಮತ್ತು ಬಿಇಒಗಳು ಮುತುವರ್ಜಿ ವಹಿಸಬೇಕು ಎಂದರು.

ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ ವ್ಯಾಪ್ತಿಯಲ್ಲಿ ಲಸಿಕೆ ನೀಡುವ ಸ್ಥಳ ಹಾಗೂ ದಿನಾಂಕವನ್ನು ಕರಪತ್ರದಲ್ಲಿ ಮುದ್ರಿಸಿ ಪ್ರಚಾರ ಕೈಗೊಳ್ಳಬೇಕು. ಅಂಗನವಾಡಿ ಕಾರ್ಯಕರ್ತೆಯರು, ಮೇಲ್ವಿಚಾರಕರು ಭಾಗವಹಿಸಬೇಕು. ಸ್ತ್ರೀ-ಶಕ್ತಿ ಗುಂಪುಗಳ ಪದಾಧಿಕಾರಿಗಳು ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಸೂಚಿಸಬೇಕು ಎಂದು ನಿರ್ದೇಶನ ನೀಡಿದರು.

ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳು, ಕಬ್ಬು ಖಟಾಯಿಸುವ ಕಾರ್ಮಿಕರ ಮಕ್ಕಳು, ಗಣಿಗಾರಿಕೆ ಕಾರ್ಮಿಕರ ಮಕ್ಕಳು, ಜಲ್ಲಿ ಒಡೆಯುವ ಕಾರ್ಮಿಕರ ಮಕ್ಕಳು ಹಾಗೂ ಇತರೆ ವಲಸೆ ಪ್ರದೇಶಗಳಲ್ಲಿ ಹುಟ್ಟಿನಿಂದ 05 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕಿಸುವಂತೆ ಕ್ರಮವಹಿಸಬೇಕು ಎಂದು ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಮಾತನಾಡಿ, ಜಿಲ್ಲೆಯಲ್ಲಿ ಹುಟ್ಟಿನಿಂದ 05 ವರ್ಷದೊಳಗಿನ 1,97,103 ಮಕ್ಕಳಿದ್ದು, ಅದರಲ್ಲಿ 72,631 ನಗರ, 1,24,472 ಗ್ರಾಮೀಣ ವ್ಯಾಪ್ತಿಯ ಮಕ್ಕಳನ್ನು ಲಸಿಕೆಗೆ ಗುರುತಿಸಲಾಗಿದೆ.

ಒಟ್ಟು 968 ಲಸಿಕೆ ಬೂತ್ಗಳನ್ನು ಹಾಕಲಾಗುವುದು ಹಾಗೂ 985 ಟೀಮ್ಗಳನ್ನು ನೇಮಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲಾ ಆರ್ಸಿಹೆಚ್ ಅಧಿಕಾರಿ ಡಾ.ಅನೀಲ್ ಕುಮಾರ್ ಅವರು ಮಾತನಾಡಿ, ರಾಷ್ಟ್ರೀಯ ಜಂತುಹುಳು ನಿವಾರಣಾ ದಿನದ ಅಂಗವಾಗಿ ಮೊದಲನೇ ಹಂತ ಫೆ.24 ರಂದು (ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ), ಎರಡನೇ ಹಂತ ಫೆ.27 ರಂದು (6-19 ಮಕ್ಕಳಿಗೆ ಶಾಲೆ ಮತ್ತು ಕಾಲೇಜು ಮಕ್ಕಳಿಗೆ) ಮತ್ತು ಮೂರನೇಯ ಹಂತ ಮಾ.08 ರಂದು(1 ರಿಂದ 5 ವರ್ಷದ ಮಕ್ಕಳು ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ಅಂಗನವಾಡಿ ಕೇಂದ್ರಗಳಲ್ಲಿ) ಜಂತು ಹುಳು ನಿವಾರಣಾ ಮಾತ್ರೆ (ಆಲ್ಬಂಡೋಜೋಲ್) ಮಾತ್ರೆಗಳನ್ನು ವಿತರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಮಾರ್ಚ್ 03 ರಂದು ನಡೆಯುವ ಪಲ್ಸ್ ಪೋಲಿಯೋ ಲಸಿಕೆ ಅಭಿಯಾನದ ಕುರಿತ ಭಿತ್ತಿಪತ್ರ ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸವರೆಡ್ಡಿ, ಜಿಲ್ಲಾ ಕುಟುಂಬ ಕಲ್ಯಾಣ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಸುಜಾತ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮತ್ತೀತರರು ಉಪಸ್ಥಿತರಿದ್ದರು.

## "ಸಂವಿಧಾನ ಮತ್ತು ರಾಷ್ಟ್ರೀಯ ಏಕತಾ ಸಮಾವೇಶ"ಕಾರ್ಯಕ್ರಮದ ನೇರ ಪ್ರಸಾರ

ಬೆಳಗಾವಿ: ಫೆ 24 ಮತ್ತು ಫೆ 25 ರಂದು ಬೆಂಗಳೂರಿನ ಕೃಷ್ಣ ವಿಹಾರ, ಅರಮನೆ ಮೈದಾನದಲ್ಲಿಜರುಗಲಿರುವ ' ರಾಷ್ಟ್ರ ಮಟ್ಟದ " ಸಂವಿಧಾನ ಮತ್ತುರಾಷ್ಟ್ರೀಯ ಏಕತಾ ಸಮಾವೇಶ" ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರಿಗೆ ಅನುಕೂಲವಾಗುವಂತೆ 'ಸದರಿಕಾರ್ಯಕ್ರಮದ ನೇರ ಪ್ರಸಾರವನ್ನು ಎಸ್.ಜಿ.ಬಾಳೇಕುಂದ್ರಿ ಇಂಜಿನೀಯರಿಂಗ್‌ಕಾನ್ಫರೆನ್ಸ್ ಹಾಲ್ (ಶೇಖ ಕಾಲೇಜ್ ಹತ್ತಿರ) ಬೆಳಗಾವಿ ಹಾಗೂ ಡಾ॥ ಬಿ.ಆರ್.ಅಂಬೇಡ್ಕರ್ ಭವನ, ಭೀಮ ನಗರಚಿಕ್ಕೋಡಿಯಲ್ಲಿ ಆಯೋಜಿಸಲಾಗಿದೆ.

ಆಸಕ್ತರು ಭಾಗವಹಿಸಿ ಸದರಿಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಬೆಳಗಾವಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

## ಸಂವಿಧಾನ ಜಾಗೃತಿ ಜಾಥದಲ್ಲಿನ ಸೃಜನಾತ್ಮಕ ಚಟುವಟಿಯಲ್ಲಿ ಬೆಳಗಾವಿ ವಿಭಾಗದಿಂದ ಬೆಳಗಾವಿ ಜಿಲ್ಲೆ ರಾಜ್ಯ ಮಟ್ಟಕ್ಕೆ ಆಯ್ಕೆ

ಬೆಳಗಾವಿ: ಸಂವಿಧಾನದ ಮೌಲ್ಯ ಮತ್ತು ಆಶಯಗಳನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜಕಲ್ಯಾಣ ಇಲಾಖೆ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ಥಬ್ದ ಚಿತ್ರಗಳನ್ನೊಳಗೊಂಡ ವಿಶೇಷ ರಥಗಳೆರೆಡು ಏಕ ಕಾಲಕ್ಕೆ ಎರಡು ಮಾರ್ಗದಲ್ಲಿ ಸಂಚರಿಸುವದರ ಮೂಲಕ ಸಂವಿಧಾನ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿದ್ದು ಸದರಿ ಕಾರ್ಯಕ್ರಮವನ್ನು ಗಣರಾಜ್ಯೋತ್ಸವದ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿಅವರು ಚಾಲನೆ ನೀಡಿದರು.

ಸ್ಥಬ್ದ ಚಿತ್ರದ ಮೆರವಣಿಗೆಯು ಜಿಲ್ಲಾದ್ಯಾಂತ ಎರಡು ಮಾರ್ಗಗಳ ಮೂಲಕ "ಮೊದಲನೆ ಮಾರ್ಗದರಥ-'ವು ಬೆಳಗಾವಿ, ಹುಕ್ಕೇರಿ, ನಿಪ್ಪಾಣಿ, ಚಿಕ್ಕೋಡಿ, ಕಾಗವಾಡ, ಅಥಣಿ, ರಾಯಬಾಗ ತಾಲೂಕುಗಳಲ್ಲಿ ಹಾಗೂ ಎರಡನೇ ಮಾರ್ಗದರಥವು ಗೋಕಾಕ, ಮೂಡಲಗಿ, ರಾಮದುರ್ಗ, ಸವದತ್ತಿ, ಬೈಲಹೊಂಗಲ, ಚನ್ನಮ್ಮನ ಕಿತ್ತೂರ, ಖಾನಾಪೂರ ತಾಲೂಕುಗಳಿಗೆ ಸ್ಥಬ್ದ ಚಿತ್ರಗಳ ಮೆರವಣಿಗೆಯು ಸಂಚರಿಸುತ್ತಿದೆ.

ಸಂವಿಧಾನದ ಮೂಲ ಆಶಯಗಳಾದ ಸರ್ವಧರ್ಮಗಳ ಸಮಭಾವ, ಸಮಸ್ತ ನಾಗರೀಕರಿಗೆ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯಕುರಿತು, ವಿಚಾರ, ಅಭಿವ್ಯಕ್ತಿ, ವಿಶ್ವಾಸ ಮತ್ತು ಧರ್ಮ ಶ್ರದ್ಧೆಯ ಸ್ವಾತಂತ್ರ್ಯತೆಯ ಅರಿವು, ಸ್ಥಾನಮಾನ ಹಾಗೂ ಅವಕಾಶಗಳ ಸಮಾನತೆಯನ್ನು ದೊರಕಿಸಲು, ರಾಷ್ಟ್ರದ ಏಕತೆ ಮತ್ತು ಅಖಂಡತೆಯನ್ನು ಬಲಗೊಳಿಸಲು, ಎಲ್ಲರಲ್ಲೂ ಭಾತೃತ್ವ ಭಾವನೆಯನ್ನು ವೃದ್ಧಿಗೊಳಿಸಲು ಈ ಎಲ್ಲಾ ಆಶಯಗಳನ್ನು ಪ್ರತಿ ಮನೆ-ಮನೆಗಳಿಗೂ, ಮನ-ಮನಗಳಿಗೂ ತಲುಪಿಸುವದು ಈ ಕಾರ್ಯಕ್ರಮದ ಮೂಲ ಧ್ಯೇಯವಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 500 ಗ್ರಾಮ ಪಂಚಾಯತಿಗಳು ಹಾಗೂ 38 ನಗರ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಸ್ಥಬ್ದ ಚಿತ್ರದ ಮೆರವಣಿಗೆಯು ಯಶಸ್ವಿಯಾಗಿ ಸಂಚರಿಸಿದೆ.

ದಿನಾಂಕ: 24/02/2024 ಮತ್ತು 25/02/2024 ರಂದು ಬೆಂಗಳೂರಿನ ಕೃಷ್ಣ ವಿಹಾರ, ಅರಮನೆ ಮೈದಾನದಲ್ಲಿ ಜರುಗಲಿರುವ ಸಂವಿಧಾನ ಮತ್ತು ರಾಷ್ಟ್ರೀಯ ಏಕತಾ ಸಮಾವೇಶ-24 ರ ಅಂಗವಾಗಿ ಸಂವಿಧಾನ ಜಾಗೃತಿ ಜಾಥದಲ್ಲಿನ ಸೃಜನಾತ್ಮಕ ಚಟುವಟಿಕೆಗಳ ಆಧಾರದ ಮೇಲೆ ರಾಜ್ಯ ಮಟ್ಟದಲ್ಲಿ ವಿಭಾಗವಾರು 2 ಜಿಲ್ಲೆಗಳನ್ನು ಆಯ್ಕೆ ಮಾಡಿದ್ದು, ಬೆಳಗಾವಿ ವಿಭಾಗದಿಂದ ಬೆಳಗಾವಿ ಜಿಲ್ಲೆಯು ಸಂವಿಧಾನ ಜಾಗೃತಿ ಜಾಥದಲ್ಲಿನ ಸೃಜನಾತ್ಮ ಕಚಟುವಟಿಯಲ್ಲಿ ಆಯ್ಕೆಯಾಗಿದೆ ಎಂದು ಬೆಳಗಾವಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಗಾರ ಖುರ್ದ ಪುರಸಭೆ: ತೆರಿಗೆ ಪಾವತಿಸಲು ಸಾರ್ವಜನಿಕರಲ್ಲಿ ಕೋರಿಕೆ

ಬೆಳಗಾವಿ: ಜಿಲ್ಲೆಯ ಕಾಗವಾಡ ತಾಲೂಕಿನ ಉಗಾರ ಖುರ್ದ ಪುರಸಭೆ ಕಾರ್ಯಾಲಯದ ಸನ್ 2016-17 ನೇ ಸಾಲಿನಿಂದ ಸನ್ 2023-24 ನೇ ಸಾಲಿನವರೆಗೆ ಶೇ. 70% ರಷ್ಟು ಜನರು ಸ್ವಯಂ ಘೋಷಿತ ಆಸ್ತಿ ತೆರಿಗೆ ನೀರಿನ ಕರ, ಅಂಗಡಿ ಬಾಡಿಗೆ, ಲೈಸನ್ಸ್ ಫೀ ತುಂಬಿರುವುದಿಲ್ಲ.

ಆದ್ದರಿಂದ ಪಟ್ಟಣದ ಅಭಿವೃದ್ಧಿ ಕೆಲಸಗಳು ಕುಂಟಿತವಾಗುತ್ತಿವೆ. ಸಾರ್ವಜನಿಕರು ಮಾ. 31 ರ ಒಳಗಾಗಿ ತೆರಿಗೆ ಪಾವತಿಸಿ ಪಟ್ಟಣದ ಅಭಿವೃದ್ಧಿ ಕೆಲಸಗಳಿಗೆ ಸಹಕರಿಸಬೇಕು ಎಂದು ಉಗಾರ ಖುರ್ದ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉತ್ತಮ ಸಮಾಜ ನಿರ್ಮಾಣದಲ್ಲಿ ತೊಡಗಿ

# ರಾಗಿ ಮಾಲ್ಟ ವಿತರಣೆ ಕಾರ್ಯಕ್ರಮದಲ್ಲಿ ಜಿಪಂ ಸಿಇಓ ರಾಹುಲ್ ಶಿಂಧೆ ಕರೆ



ಬೆಳಗಾವಿ:ಸರಕಾರ ನೀಡುತ್ತಿರುವ ಪೌಷ್ಠಿಕಾಂಶಗಳಿರುವ ಮೊಟ್ಟೆ, ಬಾಳೆಹಣ್ಣು, ಶೇಂಗಾ ಚಿಕ್ಕಿ, ರಾಗಿ ಮಾಲ್ಟ ಹಾಗೂ ಬಿಸಿ ಊಟ ಮಕ್ಕಳ ಸದೃಢತೆ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಜಿಪಂ ಸಿಇಓ ರಾಹುಲ್ ಶಿಂಧೆ ಅವರು ತಿಳಿಸಿದರು.

ನಗರದ ಕಣಬರ್ಗಿಯ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಗುರುವಾರ (ಫೆ.22) ಶಾಲಾ ಶಿಕ್ಷಣ ಇಲಾಖೆ ಹಾಗೂ ಸತ್ಯ ಸಾಯಿ ಅನ್ನಪೂರ್ಣ ಟ್ರಸ್ಟ್, ಕೆಎಂಎಫ್ ಸಂಸ್ಥೆ ಸಹಯೋಗದಲ್ಲಿ ಮಧ್ಯಾಹ್ನದ ಉಪಹಾರ ಯೋಜನೆಯಡಿ ಸರಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿನ 1 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಠಿಕ ಆಹಾರ ಸಾಯಿ ಶ್ಯೂರ್ ರಾಗಿ ಹೆಲ್ತ್ ಮಿಕ್ಸ್ ವಿತರಣೆಯ ಜಿಲ್ಲಾ ಮತ್ತು ತಾಲೂಕ ಮಟ್ಟದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರಕಾರದ ಉತ್ತಮ ಯೋಜನೆ ಬಳಸಿಕೊಂಡು ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಹಾಗೂ ವ್ಯಕ್ತಿತ್ವ ಬೆಳೆಸಿಕೊಂಡು ಉತ್ತಮ ಸಮಾಜ ನಿರ್ಮಾಣದ ಕಾರ್ಯದಲ್ಲಿ ತೊಡಗಬೇಕು ಎಂದರು.

ಡಿಡಿಪಿಐ ಮೋಹನ್ ಕುಮಾರ್ ಹಂಚಾಟೆ ಅವರು, ಸರಕಾರಿ ಸೌಲಭ್ಯಗಳ ಮಹತ್ವ ಹಾಗೂ ಪರೀಕ್ಷೆಗಳನ್ನು ಯಶಸ್ವಿಯಾಗಿ ಎದುರಿಸುವಂತೆ ತಿಳಿಸಿದರು.

ಅಕ್ಷರ ದಾಸೋಹ ವಿಭಾಗದ ಶಿಕ್ಷಣಾಧಿಕಾರಿ ಲಕ್ಷ್ಮಣರಾವ್ ಯಕ್ಕುಂಡಿ ಅವರು, ಈಗಾಗಲೇ ಮಕ್ಕಳಿಗೆ ಸರಕಾರದಿಂದ ದೊರೆಯುತ್ತಿರುವ ಉಚಿತ ಸೌಲಭ್ಯಗಳ ಮಹತ್ವ ಹಾಗೂ ರಾಗಿ ಮಾಲ್ಟ್ ಸೇವಿಸುವುದರಿಂದ ಅಪೌಷ್ಟಿಕತೆ ನಿವಾರಣೆಯ ಕುರಿತು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ರಾಜ್ಯ ಮಟ್ಟದ ಕಾರ್ಯಕ್ರಮ ಉದ್ಘಾಟಿಸಿ ಮಕ್ಕಳೊಂದಿಗೆ ನೇರ ವಿಡಿಯೋ ಸಂವಾದ ನಡೆಸಿದರು. ಈ ವೇಳೆ ವಿದ್ಯಾರ್ಥಿಗಳಾದ ಸಾಕ್ಷಿ ಪೂಜಾರಿ ಹಾಗೂ ಬಸವರಾಜ ದೇವಜಿ ಸಚಿವ ಬಂಗಾರಪ್ಪ ಅವರೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡರು.

ನಗರಸೇವಕಿ ಅಸ್ಮಿತಾ ಪಾಟೀಲ, ತಾಪಂ ಇಓ ರಾಮರೆಡ್ಡಿ ಪಾಟೀಲ, ಬೆಳಗಾವಿ ನಗರ ವಲಯದ ಬಿಇಓ ಎಲ್. ಎಸ್. ಹಿರೇಮಠ, ಕ್ಷೇತ್ರ ಸಮನ್ವಯಾಧಿಕಾರಿ ಐ.ಡಿ.ಹಿರೇಮಠ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ರಾಮನಗೌಡ ಮುದುಕನಗೌಡರ ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಫೆ. 27 ರಂದು ಎಕ್ಸಿಕಾಂ ಟೆಲಿ ಸಿಸ್ಟಮ್ಸ್ ಐಪಿಓ ಮಾರಾಟ




ಹುಬ್ಬಳ್ಳಿ : ಎಕ್ಸಿಕಾಮ್ ಟೆಲಿ-ಸಿಸ್ಟಮ್ಸ್ ಲಿಮಿಟೆಡ್ ಮಂಗಳವಾರ, ಫೆಬ್ರವರಿ 27,2024 ರಂದು ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಗೆ ಸಂಬಂಧಿಸಿದಂತೆ ತನ್ನ ಬಿಡ್ ತೆರೆಯುತ್ತದೆ. ಒಟ್ಟು ಕೊಡುಗೆ ಗಾತ್ರವು ರೂ329 ಕೋಟಿವರೆಗಿನ ಈಕ್ವಿಟಿ ಷೇರುಗಳ ಹೊಸ ಸಂಚಿಕೆ ಮತ್ತು 7,042,200 ಈಕ್ವಿಟಿ ಷೇರುಗಳ ಮಾರಾಟದ ಪ್ರಸ್ತಾಪವನ್ನು ಒಳಗೊಂಡಿದೆ.

ಆಫರ್ ನ ದರ ಪಟ್ಟಿ ಪ್ರತಿ ಈಕ್ವಿಟಿ ಷೇರಿಗೆ ರೂ135 ರಿಂದ ರೂ142 ಎಂದು ನಿಗದಿಪಡಿಸಲಾಗಿದೆ. ಕನಿಷ್ಠ 100 ಈಕ್ವಿಟಿ ಷೇರುಗಳಿಗೆ ಮತ್ತು ನಂತರ 100 ಈಕ್ವಿಟಿ ಷೇರುಗಳ ಗುಣಾಕಾರಗಳಲ್ಲಿ ಬಿಡ್ ಮಾಡಬಹುದು.

ಬಿಡ್ ಮಂಗಳವಾರ, ಫೆಬ್ರವರಿ 27,2024 ರಂದು ಚಂದಾದಾರಿಕೆಗಾಗಿ ತೆರೆಯುತ್ತದೆ ಮತ್ತು ಗುರುವಾರ, ಫೆಬ್ರವರಿ 29,2024 ರಂದು ಮುಕ್ತಾಯಗೊಳ್ಳುತ್ತದೆ.

ಈಕ್ವಿಟಿ ಷೇರುಗಳ ಹೊಸ ವಿತರಣೆಯಿಂದ ನಿವ್ವಳ ಆದಾಯವನ್ನು ಈ ಮುಂದಿನ ಧನಸಹಾಯಕ್ಕಾಗಿ ಬಳಸಿಕೊಳ್ಳಲು ಕಂಪನಿ ಪ್ರಸ್ತಾಪಿಸಿದೆ- (i) ತೆಲಂಗಾಣದ ಯೋಜಿತ ಉತ್ಪಾದನಾ ಸೌಲಭ್ಯದಲ್ಲಿ ಉತ್ಪಾದನೆ/ಜೋಡಣೆ ಮಾರ್ಗಗಳನ್ನು ಸ್ಥಾಪಿಸುವ ವೆಚ್ಚಕ್ಕೆ ಭಾಗಶಃ ಹಣಕಾಸು ಒದಗಿಸುವುದು ರೂ 145.72 ಕೋಟಿ (ii) ಮರುಪಾವತಿ/ಪೂರ್ವ-ಪಾವತಿ, ನಮ್ಮ ಕಂಪನಿಯ ಕೆಲವು ಸಾಲಗಳ ಭಾಗಶಃ ಅಥವಾ ಪೂರ್ಣವಾಗಿ ರೂ 50.29 ಕೋಟಿ (iii) ರೂ 69 ಕೋಟಿ ಮೊತ್ತದ ಭಾಗಶಃ ಧನಸಹಾಯ ವರ್ಕಿಂಗ್ ಕ್ಯಾಪಿಟಲ್ ಅವಶ್ಯಕತೆಗಳು; (iv) ಆರ್ & ಡಿ ಮತ್ತು ಉತ್ಪನ್ನ ಅಭಿವೃದ್ಧಿಯಲ್ಲಿ ಹೂಡಿಕೆ ರೂ 40 ಕೋಟಿ; ಮತ್ತು (v) ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಾಕಿ ಮೊತ್ತ.

ಮಾರಾಟದ ಪ್ರಸ್ತಾಪವು ನೆಕ್ಸ್ಟ್‌ವೇವ್ ಕಮ್ಯುನಿಕೇಷನ್ಸ್ ಪ್ರೈವೇಟ್ ಲಿಮಿಟೆಡ್ ನ 7,042,200 ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ.

ಫೆಬ್ರವರಿ 20,2024 ರಂದು ಕಂಪನಿಯ ಈ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಚಂಡೀಗಢದ ಹಿಮಾಚಲ ಪ್ರದೇಶದ ಕಂಪನಿಗಳ ರಿಜಿಸ್ಟ್ರಾರ್ ಅವರಿಗೆ ಸಲ್ಲಿಸಲಾಗಿದೆ ಮತ್ತು ಅವುಗಳನ್ನು ಬಿಎಸ್‌ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ಎಂಬ ಸ್ಟಾಕ್ ಎಕ್ಸ್ಚೇಂಜ್ ಗಳಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ.



## ಉಪೇಂದ್ರ ಜೋಶಿ ಇವರಿಂದ ದಾಸವಾಣಿ ಕಾರ್ಯಕ್ರಮ

ಬೆಳಗಾವಿ: ನಗರದ ಮಾಳಮಾರುತಿ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀ ಮಧ್ವನವಮಿ ನಿಮಿತ್ತ, ಬೆಳಗಾವಿಯ ಖ್ಯಾತ ಕಲಾವಿದ ಉಪೇಂದ್ರ ಜೋಶಿ ಇವರು ದಾಸವಾಣಿ ಕಾರ್ಯಕ್ರಮವನ್ನು ನಡೆಯಿಸಿಕೊಟ್ಟರು. ಅಲ್ಲದೇ ಕು. ಶ್ರೀದೇವಿ ಜೋಶಿ ಇವಳು ದಾಸರ ಪದಗಳನ್ನು ಪ್ರಸುತ ಪಡಿಸುವುದರ ಮೂಲಕ ಕು. ಶ್ರೀದೇವಿ ಜೋಶಿ ಇವಳು ಪಿಳ್ಳಂಗೋಪಿಯ ಚೆಲುವ ಕೃಷ್ಣನ ಹಾಡುವುದರ ಮೂಲಕ ಕೇಳುಗರ ಗಮನ ಸೆಳೆದಳು. ವಿಶೇಷವಾಗಿ ಹನುಮ - ಭೀಮ -ಮಧ್ವಾಚಾರ್ಯರ ಹಾಡುಗಳನ್ನು ಈ ಸಂದರ್ಭದಲ್ಲಿ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಮಠದ ಕಾರ್ಯದರ್ಶಿ ಸುರೇಶಾಚಾರ್ಯ ಗೋಠೆ, ಶ್ರೀಮತಿ ವಿದ್ಯಾ ಕುಲಕರ್ಣಿ ಇನ್ನಿತರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಪಲ್ಸ ಪೋಲಿಯೋ ಕಾರ್ಯಕ್ರಮ; ಜಿಲ್ಲಾ ಕಾರ್ಯಪಡೆ ಸಭೆ

# ಲಸಿಕಾ ಅಭಿಯಾನ ಯಶಸ್ವಿಗೆ ಶ್ರಮಿಸಿ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ




ಬೆಳಗಾವಿ: ಮಾರ್ಚ್ 3 ರಂದು ನಡೆಯಲಿರುವ ರಾಷ್ಟ್ರೀಯ ಪಲ್ಸ ಪೋಲಿಯೋ ಲಸಿಕಾ ಕಾರ್ಯಕ್ರಮದಲ್ಲಿ ಎಲ್ಲರೂ ಸಕ್ರೀಯವಾಗಿ ಪಾಲ್ಗೊಳ್ಳಬೇಕು. 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ ಪೋಲಿಯೋ ಹನಿ ಹಾಕಿಸುವಂತೆ ಪಾಲಕರಿಗೆ ತಿಳಿಸಬೇಕು. ಈ ಕುರಿತು ಹೆಚ್ಚಿನ ಪ್ರಚಾರ ಕೈಗೊಂಡು ಲಸಿಕಾ ಅಭಿಯಾನ ಯಶಸ್ವಿಗೊಳಿಸಲು ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ (ಫೆ.23) ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಜಿಲ್ಲಾ ಕಾರ್ಯಪಡೆ ಸಭೆಯಲ್ಲಿ ಅವರು ಮಾತನಾಡಿದರು.

ನಗರದ ಪ್ರದೇಶಗಳಲ್ಲಿ ಪ್ರತಿ ತಾಲೂಕಿನ ತಹಶೀಲ್ದಾರ ಅಧ್ಯಕ್ಷತೆಯಲ್ಲಿ ತಾಲೂಕಾ ಮಟ್ಟದ ಪಲ್ಸ್ ಪೋಲಿಯೋ ಕಾರ್ಯಕ್ರಮದ ಸಮಿತಿ ಸಭೆ ನಡೆಸಬೇಕು. ಕಬ್ಬು ಕಡಿಯುವ ಮತ್ತು ಗ್ಯಾಂಗಮನ್ ಗಳ ಮಾಹಿತಿಯನ್ನು ಕಾರ್ಖಾನೆಗಳಿಂದ ಪಡೆದು ಅವರ ಮಕ್ಕಳಿಗೆ ಲಸಿಕೆಯನ್ನು ಹಾಕುವಂತೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರ ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ವೈದ್ಯಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ಕ್ರಿಯಾಯೋಜನೆ ರೂಪಿಸಬೇಕು. ಹಳ್ಳಿಗಳಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಎರಡು ದಿನ ಮುಂಚಿತವಾಗಿ ತಿಳಿಸಬೇಕು. ಪೋಲಿಯೋ ಹನಿ ಹಾಕಿಸಿಕೊಳ್ಳುವುದಕ್ಕೆ ಲಸಿಕಾ ಕೇಂದ್ರಗಳನ್ನು ತೆರೆಯಬೇಕು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಬಗ್ಗೆ ಗ್ರಾಮ ಪಂಚಾಯತಿ ಮಟ್ಟದಲ್ಲಿ ಪ್ರಚಾರ ಕೈಗೊಳ್ಳಬೇಕು.

ಬೂತಗಳಲ್ಲಿ ಮಕ್ಕಳನ್ನು ಕರೆತಂದು ಲಸಿಕೆ ಹಾಕಿಸುವ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರ ಜೊತೆಗೆ ಎಲ್ಲ ಅಂಗನವಾಡಿಗಳಲ್ಲಿ ಕರಪತ್ರಗಳು, ಬಿತ್ತಿ ಪತ್ರಗಳು, ಬ್ಯಾನರಗಳನ್ನು ಮುಂಚೆಯೇ ಪ್ರದರ್ಶಿಸಬೇಕು ಎಂದು ಹೇಳಿದರು.

ನಗರ ಪ್ರದೇಶಗಳಲ್ಲಿ ಲಸಿಕಾ ಸಿಬ್ಬಂದಿಗಳ ಕೊರತೆಯಿರುವುದರಿಂದ ಎಲ್ಲ ಅಂಗನವಾಡಿ ಕಾರ್ಯಕರ್ತೆಯರನ್ನು ನಿಯೋಜಿಸಬೇಕು. ಶಾಲಾ ಮಕ್ಕಳಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದ ಬಗ್ಗೆ ಅರಿವು ಮೂಡಿಸಿ ಹಳ್ಳಿಗಳಲ್ಲಿ ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಬೇಕು.

ಯಾವುದೇ ಮಕ್ಕಳು ಲಸಿಕೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು. ಪಟ್ಟಣಗಳಲ್ಲಿ ಸ್ವಚ್ಛ ಭಾರತ ಮಿಷನ್ ವಾಹನಗಳ ಧ್ವನಿ ವರ್ಧಕಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಂಡು, ಪಟ್ಟಣಗಳಲ್ಲಿ ಬಿತ್ತಿ ಪತ್ರಗಳನ್ನು ಮುದ್ರಿಸಿ ಹಂಚಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

## ವಿ. ಟಿ. ಯು-ಅಸ್ಪೈರ್ ನಾಲೆಡ್ಜ್ ಮತ್ತು ಸ್ಕಿಲ್ ಇಂಡಿಯಾ ಸಂಸ್ಥೆ ನಡುವೆ ಒಡಂಬಡಿಕೆ

# ವಿಟಿಯು ನಿಂದ ವಿದ್ಯಾರ್ಥಿಗಳಿಗೆ ಉಚಿತ ಕೌಶಲ್ಯ ತರಬೇತಿ ಕಾರ್ಯಕ್ರಮ



ಬೆಳಗಾವಿ: ಜಾಗತಿಕವಾಗಿ ಕ್ಷಿಪ್ರಗತಿಯಲ್ಲಿ ಬದಲಾಗುತ್ತಿರುವ ಔದ್ಯೋಗಿಕ ಕ್ಷೇತ್ರದ ಅವಶ್ಯಕತೆಗೆ ತಕ್ಕಂತೆ ಜ್ಞಾನ ಹಾಗೂ ಕೌಶಲ್ಯಗಳ ಅವಶ್ಯಕತೆಯೂ ಇದೆ. ಇಂದಿನ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಪ್ರಮುಖ ವಿಷಯಗಳಲ್ಲಿ ಕೌಶಲ್ಯವನ್ನು ನೀಡುವ ಉದ್ದೇಶದಿಂದ ವಿ ಟಿ ಯು ಅಸ್ಪೈರ್ ನಾಲೆಡ್ಜ್ ಮತ್ತು ಸ್ಕಿಲ್ ಇಂಡಿಯಾ ಪ್ರಾ. ಲಿ. ಸಂಸ್ಥೆ ಜೊತೆ ಒಡಂಬಡಿಕೆ ಮಾಡಿಕೊಂಡಿದೆ. ಈ ಒಡಂಬಡಿಕೆ ಪ್ರಕಾರ ಅಸ್ಪೈರ್ ನಾಲೆಡ್ಜ್ ಮತ್ತು ಸ್ಕಿಲ್ ಇಂಡಿಯಾ ಪ್ರಾ. ಲಿ. ಸಂಸ್ಥೆ ಕೇಂದ್ರ ಸರ್ಕಾರದ ಸ್ಕಿಲ್ ಇಂಡಿಯಾ ಕಾರ್ಯಕ್ರಮದ ಅಡಿಯಲ್ಲಿ ನ್ಯಾಷನಲ್ ಸ್ಕಿಲ್ ಡೆವಲಪ್ಮೆಂಟ್ ಕಾರ್ಪೋರೇಶನ ಆಶ್ರಯದಲ್ಲಿ ವಿದ್ಯಾರ್ಥಿಗಳಿಗೆ ತಾಂತ್ರಿಕ ವಿಷಯಗಳ ಕುರಿತು ಉಚಿತ ಕೌಶಲ್ಯಭಿವೃದ್ಧಿ ತರಬೇತಿ ಕೋರ್ಸ್ ಗಳನ್ನು ಹಮ್ಮಿಕೊಳ್ಳಲಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಕುಲಪತಿ ಪ್ರೊ ವಿದ್ಯಾಶಂಕರ ಎಸ್. ಅವರು, ರಾಜ್ಯದ ಇಂಜಿನಿಯರಿಂಗ್ ವಿದ್ಯಾರ್ಥಿಗಳ ಸರ್ವಾಂಗೀಣ ಹಾಗೂ ಕೌಶಲ್ಯಭರಿತ ಪದವೀಧರರನ್ನಾಗಿ ಮಾಡುವ ಉದ್ದೇಶದಿಂದ ವಿ ಟಿ ಯು ಹಲವಾರು ಯೋಜನೆಗಳನ್ನು ಅನುಷ್ಠಾನ ಮಾಡಿದೆ ಎಂದು ಹೇಳಿದರು. ಈ ಯೋಜನೆಗಳ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ಕ್ಯಾಂಪಸನಲ್ಲೆ ಅನೇಕ ಔದ್ಯೋಗಿಕ ಮತ್ತು ತಾಂತ್ರಿಕ ಶಿಕ್ಷಣವನ್ನು ಒಂದೆ ವೇದಿಕೆಯಲ್ಲಿ ತಂದು ಇಂಟರ್ನ್‌ಶಿಪ್ ಮತ್ತು ತರಬೇತಿ ಮೂಲಕ ಇಂದಿನ ಔದ್ಯೋಗಿಕ ವಲಯಕ್ಕೆ ಅವಶ್ಯಕತೆ ಇರುವ ಕೌಶಲಗಳನ್ನು ನೀಡಲಾಗುತ್ತಿದೆ ಅದಕ್ಕಾಗಿ ಸಿ ಎನ್ ಸಿ ವರ್ಕಶಾಪ್ ಸ್ಥಾಪಿಸಲಾಗಿದೆ ಮತ್ತು ಇದೆ ತರಹ ಕೌಶಲ್ಯ ನೀಡುವ ಪ್ರಯೋಗಾಲಯಗಳನ್ನು ನಿರ್ಮಿಸಲಾಗುತ್ತಿದೆ. ಅದೇ ರೀತಿ ಕೊಪ್ಪಳ ಮತ್ತು ದಾಂಡೇಲಿಯಲ್ಲಿರುವ ಕೌಶಲ್ಯ ಕೇಂದ್ರಗಳಲ್ಲಿ ತರಬೇತಿ ಕಾರ್ಯಕ್ರಮಗಳು ನಡೆಯುತ್ತಿವೆ ಮತ್ತು ಸುತ್ತಲಿನ ಇಂಜಿನಿಯರಿಂಗ್ ಕಾಲೇಜುಗಳ ಜೊತೆ ಒಡಂಬಡಿಕೆ ಮಾಡಿಕೊಂಡು ಇಂಟರ್ನ್‌ಶಿಪ್ ನೀಡಲಾಗುತ್ತಿದೆ ಎಂದು ತಿಳಿಸಿದರು. ಅದೇ ನಿಟ್ಟಿನಲ್ಲಿ ಈ ಒಂದು ಒಪ್ಪಂದ ಕೌಶಲ್ಯ ತರಬೇತಿ ಯೋಜನೆಯಲ್ಲಿ ಪ್ರಮುಖ ಪಾತ್ರವನ್ನುವಹಿಸಲಿದೆ ಎಂದು ಹೇಳಿದರು.

ವಿ ಟಿ ಯು ಕುಲಪತಿಗಳಾದ ಪ್ರೊ. ವಿದ್ಯಾಶಂಕರ್ ಎಸ್. ಅವರ ಅಧ್ಯಕ್ಷತೆಯಲ್ಲಿ ವಿ ಟಿ ಯು ಕುಲಸಚಿವರಾದ ಪ್ರೊ ಬಿ ಈ ರಂಗಸ್ವಾಮಿ ಹಾಗೂ ಅಸ್ಪೈರ್ ನಾಲೆಡ್ಜ್ ಮತ್ತು ಸ್ಕಿಲ್ ಇಂಡಿಯಾ ಸಂಸ್ಥೆಯ ಚೇರಮನ್ ಮತ್ತು ಎಂ. ಡಿ. ಆದ ಡಾ. ಸಂಜಯ್ ಗಾಂಧಿ ಅವರು ಒಪ್ಪಂದಕ್ಕೆ ಸಹಿ ಹಾಕಿದರು. ಈ ಸಂದರ್ಭದಲ್ಲಿ ಕೌಶಲ್ಯ ಮಾರ್ಗದರ್ಶಕರಾದ ಶ್ರೀ. ಸುಬೋಧ ಪಾಟೀಲ್, ಬ್ರಿಸಾ ಟೆಕ್ನಾಲಜೀಸ್ ನ ಉಪಾಧ್ಯಕ್ಷ ಜಾರ್ಜ ವರ್ಗೀಸ್, ಗಣಕ ವಿಜ್ಞಾನ ವಿಭಾಗದ ಅಧ್ಯಕ್ಷ ಪ್ರೊ. ಎಸ್. ಎಲ್. ದೇಶಪಾಂಡೆ ಹಾಗೂ ವಿ. ಟಿ. ಯು. ವಿಶೇಷಾಧಿಕಾರಿ ಪ್ರೊ. ಎಸ್. ಕೆ. ಅಂಬೇಕರ್ ಹಾಜರಿದ್ದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ



ಬೆಳಗಾವಿ: ಜನಸಾಮಾನ್ಯರ ಆರೋಗ್ಯ ಕಾಪಾಡುವಲ್ಲಿ ಕೆ ಎಲ್ ಇ ಸಂಸ್ಥೆಯುಯಾವತ್ತೂ ಸಿದ್ದವೆಂದು ಅನಗೋಳ ಉದ್ಯಮಬಾಗರಸ್ತೆಯಲ್ಲಿರುವಕೆ ಎಲ್ ಇ ಎಮ್‌ಎಸ್ ಶೇಷಗಿರಿಎಂಜಿನೀಯರಿಂಗಕಾಲೇಜಿನಆವರಣದಲ್ಲಿರುವಕೆ ಎಲ್ ಇ ವೆಲ್‌ನೆಸ್ ಸೆಂಟರ್( ಡೇಕೇರ್ ಸೆಂಟರ್) ನ ಹಿರಿಯ ವೈದ್ಯಡಾ. ಮದನಡೋಂಗ್ರೆಅವರು ಮಾತನಾಡುತ್ತಿದ್ದರು.ಅವರುಇಂದು ನಗರ ಅನಗೋಳ ಉದ್ಯಮಬಾಗರಸ್ತೆಯಲ್ಲಿರುವ ಕೆ ಎಲ್ ಇ ವೆಲ್‌ನೆಸ್ ಸೆಂಟರ್( ಡೇಕೇರ್ ಸೆಂಟರ್) ಹಾಗೂ ಭಾರತೀಯಕುಟುಂಬ ಯೋಜನಾ ಸಂಸ್ಥೆಯ ಸಹಯೋಗದಲ್ಲಿನಡೆದಉಚಿತ ಆರೋಗ್ಯ ತಪಾಸಣಾ ಶಿಬಿರದ ಅಂಗವಾಗಿ ಮಾತನಾಡುತ್ತಿದ್ದರು. ಅದರಲ್ಲೂ ಈ ಭಾಗದಜನರ ಆರೋಗ್ಯ ಕಾಪಾಡುವ ಸದುದ್ದೇಶದಿಂದ ಕೆ ಎಲ್ ಇ ವೆಲ್‌ನೆಸ್ ಸೆಂಟರ್( ಡೇಕೇರ್ ಸೆಂಟರ್) ಅನ್ನು ಪ್ರಾರಂಭಿಸಲಾಗಿದೆ. ಈ ನಿಟ್ಟಿನಲ್ಲಿಇಂದುಜನರಿಗೆ ಹೆಚ್ ಐ ವಿ, ಮಧುಮೇಹ, ರಕ್ತದೊತ್ತಡದಜೋತೆಗೆ ಇನ್ನುಳಿದ ಸಾಮಾನ್ಯರೋಗಗಳ ತಪಾಸಣೆಯನ್ನುಉಚಿತವಾಗಿ ಮಾಡಲಾಗುತ್ತಿದೆ.ರೋಗ ಬರುವ ಮುಂಚೆಯೇ ತಪಾಸಣೆಗೊಳಪಡುವದರಿಂದ ಮುಂಬರುವ ರೋಗಗಳಿಂದ ದೂರವಿರಬಹುದಾಗಿದೆಎಂದು ತಿಳುವಳಿಕೆ ನೀಡಿದರು.

ಇಂದಿನ ಶಿಬಿರದಲ್ಲಿ 208ಜನರಿಗೆ ಆರೋಗ್ಯ ತಪಾಸಣೆ ಮಾಡಲಾಗಿದೆ.ಅದರಲ್ಲಿ 109 ಜನರಿಗೆ ಹೆಚ್ ಐವಿ ತಪಾಸಣೆ, 46 ಜನರಿಗೆ ಮಧುಮೇಹತಪಾಸಣೆ ಹಾಗೂ 55 ಜನರಿಗೆ ಸಾಮಾನ್ಯರೋಗಗಳ ತಪಾಸಣೆಯನ್ನು ಮಾಡಲಾಗಿದೆ.ಈ ಸಂಭಂಧಿತವಾಗಿಶಿಬಿರದಲ್ಲಿ ಪಾಲ್ಗೊಂಡ ವೈದ್ಯರನ್ನು ಹಾಗೂ ಸಿಬ್ಬಂದಿಗೆ ಅಭಿನಂದಿಸುತ್ತ ಮಾತನಾಡಿದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದಡಾ. ಎಸ್ ಸಿ ಧಾರವಾಡಅವರು ಮಾತನಾಡುತ್ತ"ಉದ್ಯಮಬಾಗ ಹಾಗೂ ಸುತ್ತಮುತ್ತಲ ಕಾರ್ಮಿಕರು ಮತ್ತು ನಾಗರಿಕರಆರೋಗ್ಯವನ್ನುಕಾಯುವಉದ್ದೇಶದಿಂದ ಕೆ ಎಲ್ ಇ ವೆಲ್‌ನೆಸ್ ಸೆಂಟರ್( ಡೇಕೇರ್ ಸೆಂಟರ್) ನ್ನು ಪ್ರಾರಂಭಿಸಲಾಗಿದೆ. ಈ ಕೇಂದ್ರದಲ್ಲಿ ಪ್ರಾಥಮಿಕಚಿಕಿತ್ಸೆಯನ್ನು ಹೊಂದಿದನಂತರ ಹೆಚ್ಚಿನಚಿಕಿತ್ಸೆಗೆ ನಮ್ಮ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಸೇವೆಗಳನ್ನು ಉಪಯೋಗಿಸಿಕೊಳ್ಳಬಹುದಾಗಿದೆ"-ಎಂದು ತಿಳುವಳಿಕೆ ನೀಡಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089